ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೪**

ಒಟ್ಟು ಪ್ರಶ್ನೆಗಳು – ೭೯

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಗುರುವಾರ, ದಿನಾಂಕ : ೧೬ನೇ ಜುಲೈ ೨೦೧೫**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು, ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

---

## ಗುಂಡಿ ಬಿದ್ದಿರುವ ಬೆಂಗಳೂರಿನ ರಸ್ತೆಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೧೨೯೬(೬೬+೧೭೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬಹುತೇಕ ರಸ್ತೆಗಳು ಗುಂಡಿಗಳು ಬಿದ್ದಿದ್ದರೂ, ನಿರ್ವಹಣೆಯ ಜವಾಬ್ದಾರಿ ಮತ್ತು ಅವಧಿ ಬಾಕಿ ಉಳಿಸಿಕೊಂಡಿರುವ ಗುತ್ತಿಗೆದಾರರು ಆಯಾ ರಸ್ತೆಗಳ ಗುಂಡಿಗಳನ್ನು ಮುಚ್ಚಲು ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಸ್ತೆ ಗುಂಡಿಗಳನ್ನು ಮುಚ್ಚದಿರುವ ಎಷ್ಟು ಗುತ್ತಿಗೆದಾರರನ್ನು ಸರ್ಕಾರ ಗುರುತಿಸಿದೆ ; ಅವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ರಸ್ತೆಗಳ ಗುಂಡಿಗಳನ್ನು ಯಾವ ಅವಧಿಯೊಳಗೆ ಮುಚ್ಚಲು ಸರ್ಕಾರ ಕ್ರಮ ಕೈಗೊಳ್ಳಲಿದೆ ?

## ಬೆಂಗಳೂರು ನಗರದಲ್ಲಿ ಕಸ ತೆರಿಗೆಯ ವಸೂಲಾತಿ ಬಗ್ಗೆ.

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೧೨೯೭(೧೩೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ನಾಗರೀಕರಿಂದ ಪ್ರತಿ ಕಟ್ಟಡಕ್ಕೆ ಎಷ್ಟು ಕಸದ ತೆರಿಗೆಯನ್ನು ಸರ್ಕಾರ ವಸೂಲಿ ಮಾಡುತ್ತಿದೆ ;

(ಆ) ಈ ರೀತಿ ತೆರಿಗೆ ಪಡೆದರೂ ಕಸವನ್ನು ಸ್ವಚ್ಛಗೊಳಿಸದಿರುವುದು ಕಾನೂನುಬಾಹಿರವಲ್ಲವೆ ;

(ಇ) ಸರ್ಕಾರ ಹಾಗೂ ಸರ್ಕಾರಿ ಅಧಿಕಾರಿಗಳ ಅದಕ್ಷತೆ ಹಾಗೂ ವ್ಯಾಪಕ ಭ್ರಷ್ಟಾಚಾರದಿಂದ ಬೆಂಗಳೂರಿನ ವಿವಿಧ ಬಡಾವಣೆಗಳ ಕಸವನ್ನು ಗುತ್ತಿಗೆದಾರರು ಪ್ರತಿನಿತ್ಯ ಸಮರ್ಪಕವಾಗಿ ವಿಲೇವಾರಿ ಮಾಡಲು ವಿಫಲವಾಗಿ, ಸಾರ್ವಜನಿಕರಿಗಾಗುತ್ತಿರುವ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಈ) ಬೆಂಗಳೂರು ನಗರದ ಕಸವನ್ನು ವಿಲೇವಾರಿ ಮಾಡಲು ಗುರುತಿಸಿರುವ ಸ್ಥಳಗಳು ಯಾವುವು ; ಅವುಗಳಿಗೆ ವಿಲೇವಾರಿ ಮಾಡಲು ಉಂಟಾಗಿರುವ ತೊಂದರೆಗೆ ಕಾರಣರ್‍ಯಾರು ; ಅವರ ಮೇಲೆ ಕೈಗೊಳ್ಳುವ ಕ್ರಮಗಳೇನು ;

(ಉ) ನಗರದ ಕಸವನ್ನು ವಿಲೇವಾರಿ ಮಾಡುವ ಸ್ಥಳಗಳಲ್ಲಿ ಸಾರ್ವಜನಿಕರು ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ, ಬಂದಿದ್ದಲ್ಲಿ, ಕಸ ವಿಲೇವಾರಿ ಮಾಡುವಲ್ಲಿ ಕೈಗೊಂಡಿರುವ ಶಾಶ್ವತ ಪರ್ಯಾಯ ಕ್ರಮಗಳೇನು ; ಹಾಗೂ ಯಾವ ಯಾವ ಸ್ಥಳಗಳಲ್ಲಿ ಮಾಡಲಾಗುವುದು ?

## ಬಿ.ಡಿ.ಎ. ನಿವೇಶನ ಅಕ್ರಮಗಳು

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೧೨೯೮(೧೩೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ. ೬೯ನೇ ವಾರ್ಡ್‌ನ ನರಸಿಂಹಸ್ವಾಮಿ ಬಡಾವಣೆಯಲ್ಲಿನ ರಾಜ ಕಾಲುವೆ ಪಕ್ಕದಲ್ಲಿ ಈ ಹಿಂದೆ ಬಿ.ಡಿ.ಎ. ನಿರ್ಮಿಸಿರುವ ಆರ್ಥಿಕ ಹಿಂದುಳಿದ ವರ್ಗಗಳ ಬಡಾವಣೆಯಲ್ಲಿನ

ಕೆಲವು ಖಾಲಿ ನಿವೇಶನಗಳಲ್ಲಿ ಕೆ.ಇ.ಬಿ. ವಾಹನ ಚಾಲಕರೊಬ್ಬರು ಅಕ್ರಮ ದಾಖಲಾತಿ ಸೃಷ್ಟಿಸಿ ಕೆಲವು ಶೀಟ್ ಮನೆಗಳನ್ನು ನಿರ್ಮಿಸಿರುವವರ ಮೇಲೆ ಕೂಡಲೆ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಒತ್ತಾಯಿಸಿರುವುದು ನಿಜವಲ್ಲವೇ ; ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಮೇಲ್ಕಂಡ ಅಕ್ರಮ ಮನೆಗಳನ್ನು ಕೂಡಲೇ ತೆರವುಗೊಳಿಸಿ ಬಿ.ಡಿ.ಎ. ಜಾಗವನ್ನು ಸರ್ಕಾರದ ವಶಕ್ಕೆ ಪಡೆಯಲು ಸಂಬಂಧಿಸಿದ ಅಧಿಕಾರಿಗಳು ಈವರೆವಿಗೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಇ) ಮೇಲ್ಕಂಡ ಅಕ್ರಮದಲ್ಲಿ ಈ ಬಡಾವಣೆಯ ಪಕ್ಕದ ಪ್ರದೇಶದಲ್ಲೆ ವಾಸಿಸುತ್ತಿರುವ ಬಿ.ಡಿ.ಎ. ಅಧಿಕಾರಿಯೊಬ್ಬರು ಶಾಮೀಲಾಗಿ ಬಿ.ಡಿ.ಎ. ಖಾಲಿ ನಿವೇಶನಗಳನ್ನು ಕಬಳಿಸುತ್ತಿರುವವರ ಬಗ್ಗೆ ಸರ್ಕಾರದಿಂದ ವಿಚಾರಣೆ ನಡೆಸಿ ಕೈಗೊಳ್ಳಲಿರುವ ಕ್ರಮಗಳೇನು ?

## ಕೆಂಪೇಗೌಡ ಪ್ರಶಸ್ತಿಗೆ ನೀಡಿದ ಚೆಕ್ಕುಗಳು ನಗಧೀಕರಣ ಆಗದೆ ಇರುವುದು

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):-**

೧೨೯(೧೩೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾಡಪ್ರಭು ಕೆಂಪೇಗೌಡ ಪ್ರಶಸ್ತಿಯನ್ನು ನೀಡಿದ ಚೆಕ್ಕುಗಳು ನಗಧೀಕರಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಚೆಕ್ ಬೌನ್ಸ್ ಪ್ರಕರಣದಿಂದಾಗಿ ಹಿರಿಯ ಸಾಹಿತಿಗಳು ಹಾಗೂ ಸಾಧಕರಿಗೆ ಅಪಮಾನ ಮಾಡಿದಂತಾಗುವುದಿಲ್ಲವೇ ; ಇದಕ್ಕೆ ಸರ್ಕಾರ ಕಂಡುಕೊಂಡ ಪರಿಹಾರವೇನು ? (ಮಾಹಿತಿ ನೀಡುವುದು)

## ಬೆಂಗಳೂರು ನಗರದಲ್ಲಿ ಸರಗಳ್ಳತನ

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೦೦ (೧೩೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕಳೆದ ೩ ವರ್ಷಗಳಿಂದ ಯಾವ ಯಾವ ಬಡಾವಣೆಗಳಲ್ಲಿ ಎಷ್ಟೆಷ್ಟು ಸರಗಳ್ಳತನಗಳಾಗಿವೆ ; ಅವುಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ಕಳ್ಳರನ್ನು ಹಿಡಿಯಲಾಗಿದೆ ಹಾಗೂ ಹಿಡಿಯದಿರುವ ಪ್ರಕರಣಗಳೆಷ್ಟು ;

(ಆ) ಸರಗಳ್ಳರ ಹಾವಳಿಯಿಂದಾಗಿ ನಗರ ಪ್ರದೇಶಗಳಲ್ಲಿ ಮಹಿಳೆಯರು ಮನೆಗಳ ಮುಂದೆ ಓಡಾಡಲು ಮುಂಜಾನೆ ಹಾಗೂ ಸಂಜೆಯ ಸಮಯದಲ್ಲಿ ವಾಯುವಿಹಾರ ಮಾಡಲು ಸಾಧ್ಯವಿಲ್ಲದ ಭಯದ ಪರಿಸ್ಥಿತಿ ನಿರ್ಮಾಣವಾಗಿದ್ದು ಇದರ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ;

(ಇ) ಕಳೆದ ೨ ತಿಂಗಳಿಂದೀಚೆಗೆ ಎಷ್ಟು ಸರಗಳ್ಳತನವಾಗಿದೆ ; ಎಲ್ಲೆಲ್ಲಿ ಹಾಗೂ ಯಾರು ಯಾರ ಸರಗಳನ್ನು ಕದಿಯಲಾಗಿದೆ ಇವುಗಳಲ್ಲಿ ಪೊಲೀಸ್‌ನವರು ಎಷ್ಟು ಕಳ್ಳರನ್ನು ಹಿಡಿದಿದ್ದಾರೆ ; ಹಿಡಿಯಲು ವಿಫಲವಾಗಿದ್ದರೆ ಕಾರಣಗಳೇನು ಹಾಗೂ ವಿಫಲತೆಗೆ ಸಂಬಂದಿಸಿದ ಪೊಲೀಸ್ ಅಧಿಕಾರಿಗಳು ಯಾರು ಯಾರು ;

(ಈ) ಸರಗಳ್ಳತನ ಹಾಗೂ ಇತ್ಯಾದಿ ಕಾನೂನುಬಾಹಿರ ಕೃತ್ಯಗಳನ್ನು ತಡೆಯಲು ಪೊಲೀಸ್ ವಿಫಲವಾಗುತ್ತಿರುವುದರಿಂದ ಇವರಿಗೆ ಪರ್ಯಾಯವಾಗಿ ಪ್ರತಿ ಬಡಾವಣೆಗಳ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಿಗೆ ಸಿ.ಸಿ., ಕ್ಯಾಮೆರಗಳನ್ನು ಅಳವಡಿಸಿ ಆ ಮೂಲಕ ಸಮಾಜಘಾತಕರು ಹಾಗೂ ಕಾನೂನು ಉಲ್ಲಂಘನೆ ಮಾಡುವವರನ್ನು ಪತ್ತೆ ಹಚ್ಚಲು ಕೂಡಲೇ ಕೈಗೊಳ್ಳುವ ಕ್ರಮಗಳೇನು ?

## ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ ಮುಂಬಡ್ತಿ ನೀಡುವ ಬಗ್ಗೆ.

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೦೧ (೧೩೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಕಚೇರಿಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳು ಎಷ್ಟು ; ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಆ) ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ಇಲ್ಲಿ ೨೦೧೪ರ ಜನವರಿಯಿಂದ ಈವರೆಗೆ ಯಾವ್ಯಾವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಮುಂಬಡ್ತಿ ನೀಡಲಾಗಿದೆ ; (ಸಿಬ್ಬಂದಿವಾರು ಪೂರ್ಣ ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳಿಗೆ ಮುಂಬಡ್ತಿ ಮೂಲಕ ತುಂಬಲು ಎಲ್ಲಾ ಅರ್ಹತೆ ಇದ್ದರೂ ಅವರನ್ನು ಪರಿಗಣಿಸಿ ಮುಂಬಡ್ತಿ ಮೂಲಕ ಖಾಲಿ ಹುದ್ದೆಗಳನ್ನು ತುಂಬದೇ ಇರಲು ಕಾರಣವೇನು ;

(ಈ) ಮುಂಬಡ್ತಿಗೆ ಅರ್ಹತೆ ಇರುವ ಅಧಿಕಾರಿಗಳ ಮೇಲೆ ಇಲಾಖಾ ವಿಚಾರಣೆ ಬಾಕಿ ಇದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ; ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ, ಅವರನ್ನು ಹೊರತುಪಡಿಸಿ, ಅವರ ನಂತರದಲ್ಲಿರುವ ಅಧಿಕಾರಿಗಳಿಗೆ ಮುಂಬಡ್ತಿ ನೀಡಲು ಇರುವ ತೊಡುಕುಗಳೇನು ?

## ಮರಳು ಗುತ್ತಿಗೆಯಲ್ಲಿ ಎಸ್‌ಸಿ/ಎಸ್‌ಟಿ ಫಲಾನುಭವಿಗಳಿಗೆ ನೀಡಿದ ಗುತ್ತಿಗೆ ಬಗ್ಗೆ.

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೦೨ (೧೭೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಮರಳು ಗುತ್ತಿಗೆ ಪರವನಾಗಿ ನೀಡಲಾಗಿದೆಯೇ ; ಎಷ್ಟೆಷ್ಟು ಬ್ಲಾಂಕುಗಳನ್ನು ಎಲ್ಲೆಲ್ಲಿ ವಿಂಗಡಿಸಲಾಗಿದೆ ;

(ಆ) ೨೦೧೪–೧೫ನೇ ಸಾಲಿನಲ್ಲಿ ಯಾರ್ಯಾರಿಗೆ ಎಲ್ಲೆಲ್ಲಿ ಗುತ್ತಿಗೆ ಪರವಾನಿಗೆ ನೀಡಲಾಗಿದೆ ;

(ಇ) ಈ ಗುತ್ತಿಗೆ ಪರವಾನಗಿ ನೀಡುವಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ನೀಡಲಾಗಿದೆಯೇ ; (ಹಾಗಿದ್ದಲ್ಲಿ ಯಾರ್ಯಾರಿಗೆ ಎಲ್ಲೆಲ್ಲಿ ಯಾವ ಯಾವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಗುತ್ತಿಗೆ ಪರವಾನಗಿ ನೀಡಲಾಗಿದೆ ?

## ರಾಜ್ಯದ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳಲ್ಲಿ ಎಸ್.ಸಿ./ ಎಸ್.ಟಿ.ಯವರ ಮೀಸಲಾತಿ ಕುರಿತು.

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೦೩ (೧೩೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಲಭ್ಯವಿರುವ ಮೀಸಲಾತಿ ಸೌಲಭ್ಯ ಜಾರಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕೆಲವು ನಿಗಮ ಮಂಡಳಿಗಳಲ್ಲಿ ಮೀಸಲಾತಿ ಜಾರಿಗೊಳಿಸುವ ಬಗ್ಗೆ, ಸೇವಾ ನಿಯಮಗಳಲ್ಲಿ ಅಗತ್ಯ ತಿದ್ದುಪಡಿ ತರಲು ಇಲಾಖೆಯಿಂದ ಆದೇಶ ಹೊರಡಿಸಲಾಗಿದೆಯೇ ; ಹೊರಡಿಸಿದ್ದರೆ ಇದರ ಪ್ರತಿಯನ್ನು ನೀಡುವುದು ?

## ಬೆಂಗಳೂರು ನಗರದ ವ್ಯಾಪ್ತಿಯಲ್ಲಿ ಕೊರೆದ ಕೊಳವೆ ಬಾವಿಗಳ ಕುರಿತು.

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೦೪ (೧೩೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ವ್ಯಾಪ್ತಿಯಲ್ಲಿ ೨೦೧೪-೧೫ನೇ ಸಾಲಿನಲ್ಲಿ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಕೊರೆದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ಇದಕ್ಕಾಗಿ ಖರ್ಚು ಮಾಡಿದ ಮೊತ್ತ ಎಷ್ಟು ; ಯಾವ ಯಾವ ಬಡಾವಣೆಗಳಲ್ಲಿ ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; ಇದಕ್ಕೆ ಖರ್ಚಾದ ಮೊತ್ತ ಎಷ್ಟು ? (ಬಡಾವಣೆವಾರು, ಕೊಳವೆ ಬಾವಿವಾರು ವಿವರ ನೀಡುವುದು)

**ಅಬಕಾರಿ ಇಲಾಖೆ ವತಿಯಿಂದ ಎಸ್.ಸಿ./ಎಸ್.ಟಿ.ಯವರಿಗೆ ಹಮ್ಮಿಕೊಂಡಿರುವ ಕಾರ್ಯಕ್ರಮದ ಬಗ್ಗೆ.**

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೦೫ (೧೩೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಬಕಾರಿ ಇಲಾಖೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗಾಗಿ ಯಾವ ಯಾವ ಕಾರ್ಯಕ್ರಮಗಳು ಜಾರಿಯಲ್ಲಿವೆ ;

(ಆ) ಯಾವ ಯಾವ ಕಾರ್ಯಕ್ರಮಗಳಲ್ಲಿ ಈ ವರ್ಗದವರಿಗೆ ರಿಯಾಯಿತಿ ನೀಡಲಾಗಿದೆ ; ಮದ್ಯ ಮಾರಾಟ ಪರವಾನಗಿಯನ್ನು ಯಾವ ಯಾವ ಉದ್ದೇಶಕ್ಕೆ ನೀಡಲಾಗಿದೆ ;

(ಇ) ಪರವನಾಗಿ ನೀಡುವಾಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ಪಾಲಿಸಲಾಗುತ್ತಿದೆಯೇ ;

(ಈ) ಪಾಲಿಸದಿದ್ದಲ್ಲಿ, ಕಾರಣವೇನು ; ಪಾಲಿಸಲಾಗುತ್ತಿದ್ದಲ್ಲಿ ಎಷ್ಟು ಜನರಿಗೆ ಪರವಾನಗಿ ನೀಡಲಾಗಿದೆ ? (ವಿವರ ನೀಡುವುದು)

## ಮರಳು ದಂಧೆಯನ್ನು ತಡೆಗಟ್ಟುವ ಕುರಿತು.

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೦೬ (೧೩೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರದಿಂದ ವಿತರಿಸುವ ಒಂದು ಲೋಡ್ ಮರಳಿಗೆ ಎಷ್ಟು ಹಣ ನಿಗದಿ ಪಡಿಸಲಾಗಿದೆ ;

(ಇ) ಖಾಸಗಿ ಮರಳು ಸಾಗಾಣಿಕೆದಾರರು ಒಂದು ಲಾರಿ ಮರಳಿಗೆ ರೂ.೮೦,೦೦೦/- ದಿಂದ ರೂ. ೧.೦೦ ಲಕ್ಷದವರೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮರಳು ಜನರ ಅಗತ್ಯ ವಸ್ತುವಾದ್ದರಿಂದ ಸುಲಭ ದರದಲ್ಲಿ ಜನರಿಗೆ ಸಿಗುವಂತಾಗಲು ಕೈಗೊಂಡ ಕ್ರಮಗಳೇನು ;

(ಉ) ಹಾಗಿದ್ದಲ್ಲಿ, ಮರಳು ದಂಧೆಯನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ದಿನಗೂಲಿ ನೌಕರರ ವಿವರ.

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೩೦೭ (೧೩೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಯಾವ ಯಾವ ಇಲಾಖೆಯಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ ಆಧಾರದ ಮೇಲೆ ವಿವಿಧ ಹುದ್ದೆಗಳಲ್ಲಿ

ಎಷ್ಟು ಮಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಇಲಾಖಾವಾರು, ಹುದ್ದೆವಾರು, ದಿನಾಂಕ ಸಹಿತ ವಿವರ ನೀಡುವುದು)

(ಆ) ಎಷ್ಟು ವರ್ಷಗಳಿಂದ ದಿನಗೂಲಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ ; (ಇಲಾಖಾವಾರು ವಿವರ ನೀಡುವುದು)

(ಇ) ಇಂತಹ ದಿನಗೂಲಿ ನೌಕರರಿಗೆ ನೀಡಲಾಗುತ್ತಿರುವ ವೇತನ, ಭತ್ಯೆ ಮತ್ತಿತರ ಸವಲತ್ತುಗಳೇನು ; (ವಿವರ ನೀಡುವುದು)

(ಈ) ಇಂತಹ ನೌಕರರ ಸೇವೆಯನ್ನು ಖಾಯಂಗೊಳಿಸುವ ಯೋಜನೆ ಸರ್ಕಾರದ ಮುಂದಿದೆಯೇ ?

## ವಾಣಿಜ್ಯ ತೆರಿಗೆ ವಂಚನೆ ಪ್ರಕರಣಗಳು.

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :-**

೧೩೦೮ (೧೩೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಕಳೆದ ೫ ವರ್ಷಗಳಲ್ಲಿ ಎಷ್ಟು ವಾಣಿಜ್ಯ ತೆರಿಗೆ ವಂಚನೆ ಪ್ರಕರಣಗಳು ದಾಖಲಾಗಿದೆ ; (ವಿಭಾಗವಾರು ವಿವರ ನೀಡುವುದು)

(ಆ) ಆ ಪೈಕಿ ಎಷ್ಟು ಪ್ರಕರಣಗಳಲ್ಲಿ ದಂಡ ವಸೂಲಿ ಮಾಡಲಾಗಿದೆ ; ದಂಡದ ಪ್ರಮಾಣವೇನು ; ಹಾಗೂ ತೆರಿಗೆ ವಂಚಿಸಿದವರ ಮೇಲೆ ಯಾವ ಕ್ರಮ ವಹಿಸಲಾಗಿದೆ ? (ವಿಭಾಗವಾರು ವಿವರ ನೀಡುವುದು)

## ಮಹಾನಗರಪಾಲಿಕೆಗಳಲ್ಲಿನ ಗ್ರಂಥಾಲಯ ಹಾಗೂ ಭಿಕ್ಷುಕರ ಕರಗಳಿಗೆ ಸಂಬಂಧಿಸಿದೆ ಮಾಹಿತಿ ಕುರಿತು.

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೧೩೦೯ (೧೩೪೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಕಳೆದ ೫ ವರ್ಷಗಳಿಂದ ವಸೂಲಿ ಮಾಡಿರುವ ಭಿಕ್ಷುಕರ ಕರ, ಗ್ರಂಥಾಲಯ ಕರ (ಸೆಸ್)ಗಳ ಮೊತ್ತ ಎಷ್ಟು ; (ಮಹಾನಗರ ಪಾಲಿಕೆವಾರು ವಿವರ ನೀಡುವುದು)

(ಆ) ಈ ರೀತಿ ವಸೂಲಿ ಮಾಡಿರುವ ಕರಗಳನ್ನು (ಸೆಸ್‌ಗಳನ್ನು) ಸಂಬಂಧಿಸಿದ ಇಲಾಖೆಗೆ ಪಾವತಿ ಮಾಡಲಾಗಿದೆಯೇ ; (ಮಹಾನಗರ ಪಾಲಿಕೆವಾರು ವಿವರ ನೀಡುವುದು)

(ಇ) ಈವರೆವಿಗೂ ಪಾವತಿ ಮಾಡದಿದ್ದಲ್ಲಿ ಕಾರಣವೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮ ವಹಿಸಿದೆ ?

## ಕೆರೆಗಳ ಮಾಲಿನ್ಯ ನಿಯಂತ್ರಣದ ಬಗ್ಗೆ.

**ಶ್ರೀ ಎಂ. ಶ್ರೀನಿವಾಸ್ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೧೦ (೧೩೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು ; (ಪ್ರದೇಶವಾರು, ಕೆರೆವಾರು, ವಿಸ್ತೀರ್ಣ ಕುರಿತ ಮಾಹಿತಿ ಒದಗಿಸುವುದು)

(ಆ) ಎಷ್ಟು ಕೆರೆಗಳಲ್ಲಿನ ನೀರು ಮಲೀನಗೊಂಡಿದೆ ; ಇದಕ್ಕೆ ಕಾರಣಗಳೇನು ; (ಮಾಹಿತಿ ಒದಗಿಸುವುದು)

(ಇ) ಮಾಲಿನ್ಯಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಿದೆ ;

(ಈ) ಈ ನಿಟ್ಟಿನಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ವೈಫಲ್ಯವಾಗಿರುವ ಅಂಶವನ್ನು ಸರ್ಕಾರ ಪರಿಗಣಿಸಿದೆಯೇ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿ ಅಕ್ರಮ ಒತ್ತುವರಿ ಕಟ್ಟಡ ತೆರವಿನ ಅಂದಾಜು ಮೌಲ್ಯ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧೧ (೧೩೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಕಳೆದ ೩ ವರ್ಷಗಳ ಅವಧಿಯಲ್ಲಿ ಅಕ್ರಮ ಒತ್ತುವರಿ ಕಾರಣದಿಂದ ತೆರವುಗೊಳಿಸಿದ ಕಟ್ಟಡಗಳ ಸಂಖ್ಯೆ ಎಷ್ಟು ; ಎಷ್ಟು ವಿಸ್ತೀರ್ಣದ ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ; (ಪ್ರದೇಶವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ತೆರವುಗೊಳಿಸಲಾದ ಪ್ರದೇಶದಲ್ಲಿ ನಿರ್ಮಿಸಲಾಗಿದ್ದ ಕಟ್ಟಡಗಳ ಮೌಲ್ಯದ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಮಾಹಿತಿ ಒದಗಿಸುವುದು ;

(ಇ) ಅಕ್ರಮ ಒತ್ತುವರಿ ತೆರವುಗೊಳಿಸುವುದರಿಂದ ಸರ್ಕಾರದ ಆಸ್ತಿ ವಶಪಡಿಸಿಕೊಂಡಂತೆಯೇ ಕಟ್ಟಡ ನಿರ್ಮಾಣಕ್ಕೆ ವ್ಯಯಿಸಿದ ಹಣ ನಷ್ಟವಾಗುವುದನ್ನು ತಪ್ಪಿಸಲು ಮತ್ತು ತಮ್ಮ ಸ್ವಯಂ ಆಸ್ತಿಯೆಂದು ದಾಖಲೆ ನಿರ್ಮಿಸಿ ಅಮಾಯಕರನ್ನು ವಂಚಿಸುವ ವ್ಯಕ್ತಿಗಳ ವಿರುದ್ಧ ಕೈಗೊಂಡ ಕ್ರಮ ಏನು ; ಈ ನಿಟ್ಟಿನಲ್ಲಿ ಸರ್ಕಾರದ ಚಿಂತನೆ ಏನು ? (ಮಾಹಿತಿ ಒದಗಿಸುವುದು)

## ಲೋಕಾಯುಕ್ತ ದಾಳಿ, ಫಲಶೃತಿ ಮತ್ತು ಸಂಸ್ಥೆಯಲ್ಲಿನ ಸಿಬ್ಬಂದಿ ಕೊರತೆ.

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧೨ (೧೩೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಲೋಕಾಯುಕ್ತ ಸಂಸ್ಥೆಯಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ನಿಜವೇ ; ಹಾಗಿದ್ದಲ್ಲಿ, ಕೊರತೆಯಿರುವ ಸಿಬ್ಬಂದಿ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ಕೊರತೆಯಿರುವ ಸಿಬ್ಬಂದಿ, ಅಧಿಕಾರಿಗಳ ಹುದ್ದೆಯನ್ನು ತುಂಬುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ; (ಮಾಹಿತಿ ಒದಗಿಸುವುದು)

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಭ್ರಷ್ಟ ಅಧಿಕಾರಿಗಳು, ಅಕ್ರಮ ಆಸ್ತಿ ಹೊಂದಿದ ಅಧಿಕಾರಿಗಳನ್ನು ಪತ್ತೆ ಹಚ್ಚುವಲ್ಲಿ ನಡೆಸಿದ ದಾಳಿಗಳು ಎಷ್ಟು ; ಯಾವ ಪ್ರಮಾಣದ ಅಕ್ರಮವನ್ನು ಈ ನಿಟ್ಟಿನಲ್ಲಿ ಗುರುತಿಸಲಾಗಿದೆ ; (ಇಲಾಖಾವಾರು, ಸಿಬ್ಬಂದಿ ಅಧಿಕಾರಿಗಳವಾರು, ಅಕ್ರಮ ಮೌಲ್ಯ ಇವುಗಳ ಪ್ರತ್ಯೇಕ ಮಾಹಿತಿಯನ್ನು ವರ್ಷಾವಾರು ಒದಗಿಸುವುದು)

(ಈ) ಲೋಕಾಯುಕ್ತ ದಾಳಿಯ ನಂತರದಲ್ಲಿ ಎಷ್ಟು ಮಂದಿ ಸಿಬ್ಬಂದಿ, ಅಧಿಕಾರಿಗಳ ಅಕ್ರಮ ಸಾಬೀತಾಗಿದೆ ; ದಾಳಿಯ ಸಮಯದಲ್ಲಿ ಇದ್ದ ಹುದ್ದೆ, ಸ್ಥಳ ಹಾಗೂ ನಂತರದಲ್ಲಿ ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳ, ಹುದ್ದೆ ಯಾವುವು ? (ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಸರ್ಕಾರಿ ಇಲಾಖೆಗಳಲ್ಲಿನ ನೇರ ನೇಮಕಾತಿ ಮತ್ತು ಬಡ್ತಿಯ ಮೂಲಕ ಹುದ್ದೆ ಭರ್ತಿ.

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧೩ (೧೩೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಇಲಾಖೆಗಳಲ್ಲಿನ ನೇರ ನೇಮಕಾತಿ ಮತ್ತು ಇಲಾಖೆಯ ಸಿಬ್ಬಂದಿಗಳಿಗೆ ಬಡ್ತಿ ಮೂಲಕ ನೇಮಕಾತಿಗೆ ಅವಕಾಶವಿರುವುದು ನಿಜವೇ ; ಯಾವ ಶೇಕಡವಾರು ಪ್ರಮಾಣದಲ್ಲಿ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ ;(ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಯಾವ ಯಾವ ಇಲಾಖೆಗಳಲ್ಲಿ, ಯಾವ ಯಾವ ಹುದ್ದೆಗಳನ್ನು ಮತ್ತು ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಈ ಸಂದರ್ಭದಲ್ಲಿ ಅನುಸರಿಸಲಾದ ಮಾನದಂಡವೇನು ; (ಪ್ರತ್ಯೇಕವಾದ ಮಾಹಿತಿ ಒದಗಿಸುವುದು)

(ಇ) ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಇದ್ದರೂ ನೇರ ನೇಮಕಾತಿಯಲ್ಲಿ ಅಂತಹ ಹುದ್ದೆಗಳನ್ನು ಭರ್ತಿ ಮಾಡುವುದರಿಂದ ಅರ್ಹ ಇಲಾಖಾ ನೌಕರರು ಬಡ್ತಿಯಿಂದ ವಂಚಿತರಾಗುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮ ಹಾಗೂ ಅನುಸರಿಸಲಾಗುತ್ತಿರುವ ಮಾನದಂಡಗಳೇನು ? (ಮಾಹಿತಿ ಒದಗಿಸುವುದು)

## ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿ ಅಭಿವೃದ್ಧಿ ಕಾಮಗಾರಿಗಳು.

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು):-**

೧೩೧೪ (೧೩೬೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶು ಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿ ಕೈಗೊಂಡಿರುವ ಅಭಿವೃದ್ಧಿ ಮತ್ತು ನಿರ್ಮಾಣ ಕಾಮಗಾರಿಗಳು ಯಾವುವು ; ಪ್ರತಿಯೊಂದು ಕಾಮಗಾರಿಯ ಹೆಸರು, ಮಂಜೂರಾಗಿರುವ ಅನುದಾನ, ಪ್ರಾರಂಭವಾದ ದಿನಾಂಕ, ಇದುವರೆಗಿನ ವೆಚ್ಚ, ಕಾಮಗಾರಿಯ ಇದುವರೆಗಿನ ಕಾರ್ಯಪ್ರಗತಿಯ ವಿವರಗಳನ್ನು ಒದಗಿಸುವುದು ;

(ಆ) ಅಂತರಗಂಗೆ ಮತ್ತು ಕಲ್ಯಾಣಿಯ ಸ್ವಚ್ಛತಾ ಕಾರ್ಯ, ಈ ನೀರಿನ ಶುದ್ಧೀಕರಣಗಳನ್ನು ತ್ವರಿತವಾಗಿ ಮಾಡಲಾಗುವುದೇ ; ಅಂತರಗಂಗೆಗೆ ಇರುವ ಬ್ಯಾರೇಜ್‌ನ್ನು ಸ್ವಲ್ಪ ಎತ್ತರಿಸಿ ಆಧುನೀಕರಣಗೊಳಿಸಿ ಉದ್ದಕ್ಕೂ ಬೆಳೆದಿರುವ ಗಿಡಗಂಟಿಗಳನ್ನು ತೆಗೆಸಿ ಭಕ್ತಾದಿಗಳಿಗೆ ಅನುಕೂಲ ಮಾಡಲಾಗುವುದೇ ?

## ರಾಜ್ಯದಲ್ಲಿ ಹೆಚ್ಚುವರಿಯಾಗಿ ಮಹಿಳಾ ಪೊಲೀಸ್ ಠಾಣೆಗಳನ್ನು ಸ್ಥಾಪಿಸುವ ಬಗ್ಗೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೫ (೧೩೬೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚುವರಿಯಾಗಿ ಎಷ್ಟು ಮಹಿಳಾ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಮತ್ತು ಎಷ್ಟು ಮಹಿಳಾ ಪೊಲೀಸ್ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಬೇಡಿಕೆಯಿದೆ ;

(ಆ) ಅತ್ಯಾಚಾರ, ಮಹಿಳೆಯರ ಮೇಲಿನ ದೌರ್ಜನ್ಯ ಇತ್ಯಾದಿ ಮಹಿಳಾ ಪ್ರಕರಣಗಳನ್ನು ತುರ್ತಾಗಿ ನಿರ್ವಹಿಸಲು ಅಗತ್ಯವಿರುವ ಮಹಿಳಾ ಪೊಲೀಸ್ ಠಾಣೆಗಳನ್ನು ತೆರೆಯಲು ಮತ್ತು ಮಹಿಳಾ ಪೊಲೀಸ್ ಸಿಬ್ಬಂದಿಗಳನ್ನು ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಯುವತಿಯರು ಕಾಣೆಯಾಗುತ್ತಿರುವ ಕುರಿತು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೬ (೧೩೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯುವತಿಯರು ಕಾಣೆಯಾಗುತ್ತಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

F-2 B/B

(ಆ) ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ಕಾಣೆಯಾದ ಯುವತಿಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಇ) ಕಾಣೆಯಾದ ಯುವತಿಯರ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ; ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚುವ ಪ್ರಗತಿಯು ನಿಧಾನವಾಗುತ್ತಿರುವ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಈ) ತ್ವರಿತ ತನಿಖೆ ಮತ್ತು ಪತ್ತೆ ಹಚ್ಚುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಉ) ಪತ್ತೆ ಹಚ್ಚಿದ ಪ್ರಕರಣಗಳಲ್ಲಿ ಭಾಗಿಯಾದ ಎಷ್ಟು ಜನ ಅಪರಾಧಿಗಳಿಗೆ ಶಿಕ್ಷೆ ವಿಧಿಸಿದೆ ? (ವಿವರ ನೀಡುವುದು)

## ಅನಧಿಕೃತ ಸಾರಾಯಿ ಮಾರಾಟ ಮಾಡುತ್ತಿರುವುದು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೧೭ (೧೩೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಅನಧಿಕೃತವಾಗಿ ಸಾರಾಯಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅನಧಿಕೃತ ಸಾರಾಯಿ ಮಾರಾಟ ಮಾಡುವವರ ವಿರುದ್ಧ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕೈಗೊಂಡಿದ್ದಲ್ಲಿ, ಪ್ರತಿ ಹಳ್ಳಿಯಲ್ಲೂ ಕಿರಾಣಿ ಅಂಗಡಿ, ಹೋಟೆಲ್, ತಂಪು ಪಾನೀಯ ಅಂಗಡಿಗಳಲ್ಲಿ ಮಾರಾಟ ಮಾಡುತ್ತಿರುವವರ ಬಗ್ಗೆ ದಾಖಲಾದ ಪ್ರಕರಣಗಳೆಷ್ಟು ;

(ಈ) ಅನಧಿಕೃತವಾಗಿ ಮಾರಾಟ ಮಾಡುವವರಿಗೆ ಇಲಾಖಾ ಅಧಿಕಾರಿಗಳೆ ಸಹಕಾರ ನೀಡುತ್ತಿದ್ದು, ಆ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ದಾಖಲಾದ ಪ್ರಕರಣಗಳ ಮಾಹಿತಿ ಗ್ರಾಮವಾರು, ತಾಲ್ಲೂಕುವಾರು ನೀಡುವುದು)

## ರೌಡಿ ಶೀಟರ್‌ಗಳ ಪಟ್ಟಿ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೧೮ (೧೩೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್ ಕರ್ನಾಟಕದ ಆರೂ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಎಷ್ಟು ಜನರನ್ನು ರೌಡಿಶೀಟ್‌ಗೆ ಸೇರಿಸಲಾಗಿದೆ ; (ಪ್ರತಿ ಠಾಣೆಯ ಪ್ರತಿಯೊಬ್ಬರ ಹೆಸರು, ವಯಸ್ಸು, ವಿಳಾಸ ಹಾಗೂ ಅವರ ಮೇಲಿನ ಆರೋಪ ಮುಂತಾದ ವಿವರದ ಸಂಪೂರ್ಣ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು)

(ಆ) ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಎಷ್ಟು ರೌಡಿ ಶೀಟರ್‌ಗಳನ್ನು ಪಟ್ಟಿಯಿಂದ ಮುಕ್ತಗೊಳಿಸಲಾಗಿದೆ ; ಪ್ರತಿ ಠಾಣಾವಾರು ಪ್ರತಿಯೊಬ್ಬರ ಹೆಸರು, ವಯಸ್ಸು, ವಿಳಾಸ ಮತ್ತು ಕೈಬಿಡಲು ಕಾರಣಗಳೇನು ? (ತಾಲ್ಲೂಕುವಾರು ವಿವರ ಒದಗಿಸುವುದು)

## ಹೈದರಾಬಾದ್ ಕರ್ನಾಟಕ ಜಿಲ್ಲೆಗಳಲ್ಲಿ ಕೈಗಾರಿಕಾ ಸ್ಥಾಪನೆ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೧೯ (೧೩೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್ ಕರ್ನಾಟಕದ ೬ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಿಂದ ಕೈಗಾರಿಕೆಗಳ ಸ್ಥಾಪನೆಗೆ ಕೈಗೊಂಡ ಕ್ರಮಗಳೇನು ;

(ಆ) ಈ ಕೈಗಾರಿಕೆಗಳ ಸ್ಥಾಪನೆಗಾಗಿ ಭೂಮಿಯನ್ನು ಖರೀದಿಸಲಾಗಿದೆಯೇ ;

(ಇ) ಈ ಕೈಗಾರಿಕಾ ಸ್ಥಾಪನೆಗಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿವೇಶನಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೨೦ (೧೩೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೫ ರಿಂದ ೨೦೧೫–೧೬ನೇ ಸಾಲಿನವರೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸಾರ್ವಜನಿಕರಿಗೆ ನಿವೇಶನಗಳನ್ನು ಹಂಚುವ ಸಲುವಾಗಿ ಎಷ್ಟು ಬಡಾವಣೆಗಳನ್ನು ನಿರ್ಮಿಸಲು ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿತ್ತು ;

(ಆ) ಈ ಬಡಾವಣೆಗಳಲ್ಲಿ ನಿವೇಶನಗಳನ್ನು ಖರೀದಿಸಲು ಎಷ್ಟು ಜನರು ಅರ್ಜಿಯನ್ನು ಸಲ್ಲಿಸಿದ್ದರು ; (ವಿವರ ನೀಡುವುದು)

(ಇ) ಹಾಗೆ ಉಳಿದವರಿಗೆ ಎಷ್ಟು ತಿಂಗಳು/ದಿನಗಳಲ್ಲಿ ನಿವೇಶನಗಳನ್ನು ಹಂಚಲಾಗಿರುತ್ತದೆ ; ನಿವೇಶನಕ್ಕಾಗಿ ಕಾದಿರುವ ಜನರೆಷ್ಟು ;

(ಈ) ಹತ್ತು ವರ್ಷಗಳಿಂದ ಹಂಚಿಕೆ ಮಾಡಲಾದ ಫಲಾನುಭವಿಗಳು/ ನಿವೇಶನಗಳು ಎಷ್ಟು ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಲೋಕಾಯುಕ್ತ ಅಧಿಕಾರಿಗಳು ಭ್ರಷ್ಟಾಚಾರದಲ್ಲಿ ತೊಡಗಿರುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೨೧ (೧೭೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪುರಸಭೆ/ಸಿಎಂಸಿ/ಟಿಎಂಸಿ/ಟಿಪಿಎಸ್‌ಗಳಲ್ಲಿನ ಎಷ್ಟು ಅಧಿಕಾರಿ ನೌಕರರುಗಳ ಮನೆಯ ಮೇಲೆ ಲೋಕಾಯುಕ್ತ ದಾಳಿ ನಡೆಸಿದೆ; (ಕಳೆದ ಎರಡು ವರ್ಷದ ತಾಲ್ಲೂಕುವಾರು ಹೆಸರು ಸಮೇತ ವಿವರ ಒದಗಿಸುವುದು)

(ಆ) ಇವರುಗಳಿಂದ ಆದಾಂಯುಕ್ಕಿಂತ ಹೆಚ್ಚಿನ ಆಸ್ತಿಪಾಸ್ತಿ ಗುರುತಿಸಲಾಗಿದೆಯೇ; ಲೋಕಾಯುಕ್ತರು ಯಾವ ಆಧಾರದ ಮೇಲೆ ದಾಳಿಗೆ ಸಿದ್ದತೆ ನಡೆಸುತ್ತದೆ;

(ಇ) ಈ ದಾಳಿಗಳಲ್ಲೂ ಸಹ ಲೋಕಾಯುಕ್ತ ಅಧಿಕಾರಿ/ನೌಕರರು ಭ್ರಷ್ಟಾಚಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಎಷ್ಟು ಪ್ರಕರಣಗಳಲ್ಲಿ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಪತ್ತೆ ಹಚ್ಚಲಾಗಿದೆ ? (ವಿವರ ಸಮೇತ ಮಾಹಿತಿ ಒದಗಿಸುವುದು)

## ಸರಗಳ್ಳತನ ಪ್ರಕರಣದ ಬಗ್ಗೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೧೩೨೨ (೧೭೩೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆ ಕಲಬುರಗಿ ನಗರದಲ್ಲಿ ಕಳೆದ ೨ ವರ್ಷಗಳಿಂದ ಎಷ್ಟು ಸರಗಳ್ಳತನ ಪ್ರಕರಣಗಳು ದಾಖಲಾಗಿವೆ ; (ಸರಗಳ್ಳತನವಾಗಿರುವವರ ಹೆಸರು ಮತ್ತು ಅವರುಗಳು ನೀಡಿದ ದೂರಿನ ಸಂಖ್ಯೆ ಸಮೇತ ವಿವರ ನೀಡುವುದು)

(ಆ) ಈ ಸರಗಳ್ಳತನದ ಎಷ್ಟು ಕೇಸುಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ಚಿನ್ನಾಭರಣಗಳನ್ನು ಹಿಂತಿರುಗಿಸಲಾಗಿದೆ ; (ಹೆಸರು ಸಮೇತ ವಿವರ ಒದಗಿಸುವುದು)

(ಇ) ಎಷ್ಟು ಕೇಸು ಇನ್ನೂ ಪತ್ತೆ ಹಚ್ಚಬೇಕಾಗಿದೆ; (ಹೆಸರು ಸಮೇತ ವಿವರ ಒದಗಿಸುವುದು)

(ಈ) ಸರಗಳ್ಳರನ್ನು ಪತ್ತೆ ಹಚ್ಚುವಲ್ಲಿ ಕಲಬುರಗಿ ನಗರದ ಪೊಲೀಸರು ವಿಫಲಾಗಿರುವರೇ ; ಎಷ್ಟು ದಿನದಲ್ಲಿ ಉಳಿದ ಕೇಸುಗಳನ್ನು ಪತ್ತೆ ಹಚ್ಚಲಾಗುವುದೇ ? (ಕೇಸುವಾರು ವಿವರ ನೀಡುವುದು)

## ಸವದತ್ತಿ ತಾಲ್ಲೂಕಿನ ಶಿರಸಂಗಿ ಕಾಳಿಕಾ ದೇವಸ್ಥಾನ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):-**

೧೩೨೩ (೧೭೩೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಶಿರಸಂಗಿ ಕಾಳಿಕಾ ದೇವಿ ದೇವಸ್ಥಾನಕ್ಕೆ ರಾಜ್ಯದ ನಾನಾ ಭಾಗಗಳಿಂದ ಭಕ್ತರು ಬರುತ್ತಿದ್ದು, ಬಂದ ಭಕ್ತರಿಗೆ ವಾಸ್ತವ್ಯ ಮಾಡಲು ಇಲ್ಲಿ ಯಾವುದೇ ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿ ರಾತ್ರಿ ನಿವಾಸ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರು, ಸುಸಜ್ಜಿತವಾದ ಮೂತ್ರಾಲಯ-ಶೌಚಾಲಯ, ತಂಗುದಾಣ ಮೊದಲಾದ ಸೌಕರ್ಯಗಳಿಂದ ಈ ದೇವಸ್ಥಾನ ವಂಚಿತವಾದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಇಲ್ಲಿ ಧಾರ್ಮಿಕ ಕಾರ್ಯಕ್ರಮ ನಡೆಯುತ್ತಿದ್ದು, ಸುಸಜ್ಜಿತವಾದ ಕಲ್ಯಾಣ ಮಂಟಪ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ ;

(ಊ) ಉನ್ನತ ದರ್ಜೆಯ ಧಾರ್ಮಿಕ ದತ್ತಿ ಅಧಿಕಾರಿಗಳ ಮೂಲಕ ಸ್ಥಳ ಪರಿಶೀಲನೆ ಮಾಡಿಸಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಶೀಘ್ರವಾಗಿ ಒದಗಿಸುವಂತೆ ಸೂಚಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗುವುದೇ ?

## ಬೆಳಗಾವಿ ಜಿಲ್ಲೆಯಲ್ಲಿ ಮರಳು ಅಭಾವದಿಂದ ಕಟ್ಟಡಗಳ ಕಾಮಗಾರಿ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೨೪ (೧೭೩೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯಲ್ಲಿ ಮರಳು ಸಾಗಾಣಿಕೆ ನಿರ್ಭಂದ ಮಾಡಿದ್ದರಿಂದ ಕಟ್ಟಡ ಕಟ್ಟುವ ಕೆಲಸಗಳು ಸ್ಥಗಿತಗೊಂಡಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಜಿಲ್ಲಾಧಿಕಾರಿಗಳು, ಪೊಲೀಸ್ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯವರು ಮರಳು ಸಾಗಾಣಿಕೆಯನ್ನು ನಿರ್ಭಂದಿಸಲು ಕಾರಣವೇನು;

(ಇ) ಇದರಿಂದ ಕಟ್ಟಡ ಕಟ್ಟುತ್ತಿರುವ ಸಾರ್ವಜನಕರಿಗೆ, ಗುತ್ತಿಗೆದಾರರಿಗೆ, ಕಾರ್ಮಿಕರಿಗೆ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ನಿರ್ಬಂದಗಳನ್ನು ಕೂಡಲೇ ತೆಗೆದುಹಾಕಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ;

(ಉ) ಪ್ರಸ್ತುತ ಮರಳನ್ನು ಯಾವ ಬೆಲೆಯಲ್ಲಿ ಸಾರ್ವಜನಿಕರಿಗೆ ದೊರಕುವಂತೆ ಸರ್ಕಾರದವರು ಕ್ರಮ ಕೈಗೊಂಡಿರುವರು;

(ಊ) ಯಾವುದೇ ಅಧಿಕಾರಿಗಳಿಂದ ಮರಳು ಪರವಾನಿಗೆ ದೊರೆಯುತ್ತಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪರವಾನಿಗೆ ಯಾರು ಕೊಡುವರು; ನಿಯಮಗಳು ಏನು? (ಸಂಪೂರ್ಣ ವಿವರ ನೀಡುವುದು)

## ಬೆಳಗಾವಿ ನಗರದಲ್ಲಿ ಸೇವೆ ಸಲ್ಲಿಸುತ್ತಿರುವ ರಾಜ್ಯ ಸರ್ಕಾರಿ ನೌಕರರ ಮನೆ ಬಾಡಿಗೆಯಲ್ಲಿ ತಾರತಮ್ಯ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೨೫ (೧೭೩೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ನಗರದಲ್ಲಿ ಸೇವೆ ಸಲ್ಲಿಸುತ್ತಿರುವ ರಾಜ್ಯ ಸರ್ಕಾರದ ನೌಕರರಿಗೂ ಹಾಗೂ ಕೇಂದ್ರ ಸರ್ಕಾರದ ನೌಕರರಿಗೂ ಬಾಡಿಗೆ ಹಣ ಕೊಡುವಲ್ಲಿ ತಾರತಮ್ಯವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ನೌಕರರಿಗೂ ಕೂಡ ಕೇಂದ್ರ ಸರ್ಕಾರದ ನೌಕರರಿಗೆ ಬಾಡಿಗೆ ಕೊಡುವಂತೆ ಮನೆ ಬಾಡಿಗೆ ನೀಡಲು ಕ್ರಮ ಕೈಗೊಳ್ಳಲಾಗುವುದೇ?

## ಹಾರೂಗೇರಿ ಗ್ರಾಮದ ಶ್ರೀ ಚನ್ನವೃಷಬೇಂದ್ರ ಸ್ವಾಮಿ ದೇವಸ್ಥಾನ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೨೬ (೧೭೩೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಹಾರೂಗೇರಿ ಗ್ರಾಮದ ಶ್ರೀ ಚನ್ನವೃಷಬೇಂದ್ರ ಸ್ವಾಮಿ ದೇವಸ್ಥಾನಕ್ಕೆ ರಾಜ್ಯದ ನಾನಾ ಭಾಗಗಳಿಂದ ಭಕ್ತರು ಬರುತ್ತಿದ್ದು ಬಂದ ಭಕ್ತರಿಗೆ ವಾಸ್ತವ್ಯ ಮಾಡಲು ಇಲ್ಲಿ ಯಾವುದೇ ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿ ಯಾತ್ರಿ ನಿವಾಸ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರು ಸುಸಜ್ಜಿತವಾದ ಮೂತ್ರಾಲಯ-ಶೌಚಾಲಯ, ತಂಗುದಾಣ ಮೊದಲಾದ ಸೌಕರ್ಯಗಳಿಂದ ಈ ದೇವಸ್ಥಾನ ವಂಚಿತವಾದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

(ಉ) ಇಲ್ಲಿ ಧಾರ್ಮಿಕ ಕಾರ್ಯಕ್ರಮ ನಡೆಯುತ್ತಿದ್ದು ಸುಸಜ್ಜಿತವಾದ ಕಲ್ಯಾಣ ಮಂಟಪ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

(ಊ) ಉನ್ನತ ದರ್ಜೆಯ ಧಾರ್ಮಿಕ ದತ್ತಿ ಅಧಿಕಾರಿಗಳ ಮೂಲಕ ಸ್ಥಳ ಪರಿಶೀಲನೆ ಮಾಡಿಸಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಶೀಘ್ರವಾಗಿ ಒದಗಿಸುವಂತೆ ಸೂಚಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗುವುದೇ?

## ಅರಭಾವಿ ಗ್ರಾಮದ ಶ್ರೀ ದುರದುಂಡೇಶ್ವರ ದೇವಸ್ಥಾನ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೩೨೭ (೧೭೩೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ ಗೋಕಾಕ ತಾಲ್ಲೂಕಿನ ಅರಬಾವಿ ಗ್ರಾಮದಲ್ಲಿ ಪುರಾತನವಾದ ಶ್ರೀ ದುರುದಂಡೇಶ್ವರಮಠಕ್ಕೆ ರಾಜ್ಯದ ನಾನಾ ಭಾಗಗಳಿಂದ ಭಕ್ತರು ಬರುತ್ತಿದ್ದು ಬಂದ ಭಕ್ತರಿಗೆ ವಾಸ್ತವ್ಯ ಮಾಡಲು ಇಲ್ಲಿ ಯಾವುದೇ ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿ ಯಾತ್ರಿ ನಿವಾಸ ಕಟ್ಟಲು ಕ್ರಮ ಕೈಗೊಳ್ಳಲಾವುದೇ;

(ಇ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರು, ಸುಸಜ್ಜಿತವಾದ ಮೂತ್ರಾಲಯ-ಶೌಚಾಲಯ, ತಂಗುದಾಣ ಮೊದಲಾದ ಸೌಕರ್ಯಗಳಿಂದ ಈ ದೇವಸ್ಥಾನ ವಂಚಿತವಾದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

(ಉ) ಇಲ್ಲಿ ಧಾರ್ಮಿಕ ಕಾರ್ಯಕ್ರಮ ನಡೆಯುತ್ತಿದ್ದು ಸುಸಜ್ಜಿತವಾದ ಕಲ್ಯಾಣ ಮಂಟಪ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

(ಊ) ಉನ್ನತ ದರ್ಜೆಯ ಧಾರ್ಮಿಕ ದತ್ತಿ ಅಧಿಕಾರಿಗಳ ಮೂಲಕ ಸ್ಥಳ ಪರಿಶೀಲನೆ ಮಾಡಿಸಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಶೀಘ್ರವಾಗಿ ಒದಗಿಸುವಂತೆ ಸೂಚಿಸಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗುವುದೇ?

## ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯವರ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೨೮ (೧೭೫೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿಯವರ ಸಂಖ್ಯೆ ಎಷ್ಟು;

(ಆ) ಇಂತಹ ಅಕ್ರಮ ವಲಸಿಗರಿಂದ ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಮಲೆನಾಡ ಭಾಗಗಳಲ್ಲಿರುವ ಕಾಫಿ ತೋಟಗಳಲ್ಲಿ ಇಂತಹ ಅಕ್ರಮ ಬಾಂಗ್ಲಾದೇಶಿ ವಲಸಿಗರು ಬಹಳ ದೊಡ್ಡ ಸಂಖ್ಯೆಯಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಬೆಂಗಳೂರಿನ ಮೆಲ್ಸೇತುವೆಗಳ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೨೯ (೧೭೬೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದಲ್ಲಿರುವ ಮೆಲ್ಸೇತುವೆಗಳ ಸಂಖ್ಯೆ ಎಷ್ಟು; ಕಳೆದ ೨ ವರ್ಷಗಳಿಂದ ಎಷ್ಟು ಹೊಸ ಮೆಲ್ಸೇತುವೆಗಳನ್ನು ನಿರ್ಮಿಸಲಾಗಿದೆ; (ವಿವರ ನೀಡುವುದು)

(ಆ) ಈ ಮೆಲ್ಸೇತುವೆಗಳ ನಿರ್ವಹಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಮೆಲ್ಸೇತುವೆಗಳ Escalator, Lift ಅಳವಡಿಸಲು ಸರ್ಕಾರ ಚಿಂತಿಸಿದೆಯೇ;

(ಈ) ಅಳವಡಿಸಿದ್ದರೆ ಯಾವ್ಯಾವ ಸ್ಥಳಗಳಲ್ಲಿ ಅಳವಡಿಸಲಾಗಿದೆ? (ಮಾಹಿತಿ ನೀಡುವುದು)

## ಒಣ ತ್ಯಾಜ್ಯ ವಿಲೇವಾರಿ ಕುರಿತು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೩೦ (೧೭೬೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರದ ಒಣ ತ್ಯಾಜ್ಯ ವಿಲೇವಾರಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ನಗರದಲ್ಲಿ ಪ್ರತಿ ನಿತ್ಯ ಸಂಗ್ರಹವಾಗುವ ಕಸದ ಪ್ರಮಾಣ ಎಷ್ಟು; (ವಾರ್ಡ್‌ವಾರು ವಿವರ ನೀಡುವುದು)

(ಆ) ಈ ಒಣ ತ್ಯಾಜ್ಯ ವಿಲೇವಾರಿಯಲ್ಲಿ ದೊಡ್ಡ ಪ್ರಮಾಣದಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

## ನಿವೃತ್ತ ಸಿಬ್ಬಂದಿಯವರ ಸೇವೆಯನ್ನು ಪಡೆಯುತ್ತಿರುವುದು.

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೩೩೧ (೧೭೩೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯಾಲಯ/ಗೃಹಕಛೇರಿಯಲ್ಲಿ ಮತ್ತು ಆಪ್ತ ಸಹಾಯಕರ ಹುದ್ದೆಯಲ್ಲಿ ಬಹುತೇಕ ನಿವೃತ್ತ ಸಿಬ್ಬಂದಿಯವರ ಸೇವೆಯನ್ನು ಪಡೆಯುತ್ತಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಹಾಗಿದ್ದಲ್ಲಿ, ಅಂತಹ ಸಿಬ್ಬಂದಿಯ ಹುದ್ದೆವಾರು ವಿವರಗಳನ್ನು ಒದಗಿಸುವುದು;

(ಆ) ಸದರಿ ನಿವೃತ್ತ ಸಿಬ್ಬಂದಿಯವರು ಸರ್ಕಾರದಿಂದ ಮಾಸಿಕವಾಗಿ ಪಡೆಯುತ್ತಿರುವ ಪಿಂಚಣಿಮೊತ್ತ ಎಷ್ಟು; (ಸಿಬ್ಬಂದಿವಾರು ವಿವರ ಒದಗಿಸುವುದು)

(ಇ) ಸದರಿ ನಿವೃತ್ತ ಸಿಬ್ಬಂದಿಯವರು ನಿವೃತ್ತಿ ನಂತರ ಪ್ರಸ್ತುತ ನಿರ್ವಹಿಸುತ್ತಿರುವ ಕಾರ್ಯಸ್ವರೂಪ ಹಾಗೂ ಬಳಸಿಕೊಳ್ಳುತ್ತಿರುವ ಸೇವೆಗೆ ಸರ್ಕಾರದಿಂದ ಮಾಸಿಕವಾಗಿ ನಿಗಧಿಪಡಿಸಿರುವ ವೇತನ ಮತ್ತು ಇತರೆ ಭತ್ಯೆಗಳು ಎಷ್ಟು; (ಸಿಬ್ಬಂದಿವಾರು ವಿವರ ಒದಗಿಸುವುದು)

(ಈ) ಸದರಿ ನಿವೃತ್ತ ಸಿಬ್ಬಂದಿಯವರಿಗೆ ಸರ್ಕಾರಿ/ಇಲಾಖೆಯಿಂದ ವಾಹನಗಳನ್ನು ಒದಗಿಸಲಾಗಿದೆಯೇ; ಇದಕ್ಕೆ ಇವರು ಅರ್ಹರಿದ್ದಾರೆಯೇ; ಹಾಗಿದ್ದಲ್ಲಿ ವಾಹನಗಳ, ಚಾಲಕರ ಮತ್ತು ಅದಕ್ಕೆ ಮಾಹೆಯಾನ ತಗಲುತ್ತಿರುವ ವೆಚ್ಚದ ಸಂಪೂರ್ಣ ಮಾಹಿತಿಗಳನ್ನು ಒದಗಿಸುವುದು?

## ಉಡುಪಿ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯ ಮತ್ತು ಪಶು ಆಸ್ಪತ್ರೆಗಳ ಕುರಿತು .

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೨ (೧೭೪೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು; ಮತ್ತು ಯಾವುವು; (ತಾಲ್ಲುಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯ ಹಾಗೂ ಪಶು ಆಸ್ಪತ್ರೆಗಳಿಗೆ ಮಂಜೂರಾಗಿರುವ ಪಶು ವೈದ್ಯಾಧಿಕಾರಿಗಳ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಕೊರತೆ ಇರುವ ಪಶು ವೈದ್ಯಾಧಿಕಾರಿಗಳ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಯಲ್ಲಿರುವ ಗೋಮಾಳಗಳ ಸಂಖ್ಯೆ ಎಷ್ಟು; ಯಾವುವು; ಗೋಮಾಳಗಳ ರಕ್ಷಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ತಾಲ್ಲೂಕುವಾರು ವಿವರ ನೀಡುವುದು)

## ಕುಂದಾಪುರ ಮತ್ತು ಉಡುಪಿ ತಾಲ್ಲೂಕಿನ ಗಣಿಗಾರಿಕೆ ಪರವಾನಿಗೆ ಹೊಂದಿದವರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೩ (೧೭೪೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕುಂದಾಪುರ ಮತ್ತು ಉಡುಪಿ ತಾಲ್ಲೂಕುಗಳಲ್ಲಿ ಕೆಂಪು ಕಲ್ಲು ಮತ್ತು ಶಿಲೆ ಕಲ್ಲು ಗಣಿಗಾರಿಕೆಗೆ ಪರವಾನಿಗೆ ಹೊಂದಿದವರ ಸಂಖ್ಯೆ ಎಷ್ಟು; ಅವರು ಗಣಿಗಾರಿಕೆಗೆ ಪರವಾನಿಗೆ ಹೊಂದಿರುವ ಗ್ರಾಮ ಯಾವುದು; ಮತ್ತು ವಿಸ್ತೀರ್ಣವೆಷ್ಟು; (ಪರವಾನಿಗೆದಾರರ ಹೆಸರು, ವಿಳಾಸ, ಗ್ರಾಮ, ವಿಸ್ತೀರ್ಣ, ಪರವಾನಿಗೆಯ ಅವಧಿಯೊಂದಿಗೆ ವಿವರ ನೀಡುವುದು)

(ಆ) ಕುಂದಾಪುರ ಮತ್ತು ಉಡುಪಿ ತಾಲ್ಲೂಕುಗಳಲ್ಲಿ ಅರ್ಜಿ ನಮೂನೆ ೫೦ ಮತ್ತು ೫೩ರಡಿಯಲ್ಲಿ ಅರ್ಜಿ ಸಲ್ಲಿಸಿದ ಸ್ಥಳಗಳಲ್ಲಿ ಕೃಷಿಯನ್ನು ಹಾಳುಗೆಡವಿ ಅಕ್ರಮವಾಗಿ ಕೆಂಪು ಕಲ್ಲು ಕಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಎಷ್ಟು ಪ್ರಮಾಣದ ದಂಡವನ್ನು ವಿಧಿಸಲಾಗಿದೆ; (ತಾಲ್ಲೂಕುವಾರು ಪ್ರಕರಣವಾರು ವಿವರ ನೀಡುವುದು)

(ಇ) ಅಕ್ರಮ ಗಣಿಗಾರಿಕೆಯಿಂದ ಹಾನಿಯಾದ ರೈತರ ಕೃಷಿಗೆ ಇಲಾಖೆಯಿಂದ ಪರಿಹಾರ ನೀಡಲಾಗುವುದೇ; ಇಲ್ಲವಾದಲ್ಲಿ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದೇ;

(ಈ) ಉಡುಪಿ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆಯ ಬಗ್ಗೆ ಎಷ್ಟು ದೂರುಗಳು ಬಂದಿವೆ; ಈ ದೂರುಗಳ ಬಗ್ಗೆ ಸರ್ಕಾರ

ತೆಗೆದುಕೊಂಡ ಕ್ರಮಗಳೇನು? (ವರ್ಷವಾರು, ಪ್ರಕರಣವಾರು, ತಾಲ್ಲೂಕುವಾರು ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿನ ಗಣಿಗಾರಿಕೆ ಪರವಾನಿಗೆದಾರರಿಂದ ಸರ್ಕಾರಕ್ಕೆ ನೀಡುವ ಬಾಕಿ ಇರುವ ಮೊತ್ತದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೪ (೧೭೪೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉಡುಪಿ ಜಿಲ್ಲೆಯಲ್ಲಿನ ಗಣಿಗಾರಿಕೆ ಪರವಾನಿಗೆದಾರರಿಂದ ಸರ್ಕಾರದ ಬೊಕ್ಕಸಕ್ಕೆ ಪಾವತಿಸಲು ಬಾಕಿ ಇರುವ ಮೊತ್ತವೆಷ್ಟು; ಈ ಬಾಕಿ ವಸೂಲಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು: (ಪ್ರಕರಣವಾರು, ಮೊತ್ತವಾರು, ತಾಲ್ಲೂಕುವಾರು ವಿವರ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿನ ಗಣಿಗಾರಿಕೆ ಪರವಾನಿಗೆದಾರರಿಂದ ಸರ್ಕಾರದ ಬೊಕ್ಕಸಕ್ಕೆ ಪಾವತಿಸಲು ಬಾಕಿ ಇರುವ ಮೊತ್ತದ ಮೇಲೆ ನ್ಯಾಯಾಲಯದಲ್ಲಿ ದಾವೆ ಹೂಡಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಮತ್ತು ಅವು ಯಾವುವು; (ಪ್ರಕರಣವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಆ ಪ್ರಕರಣಗಳ ಪೈಕಿ ನ್ಯಾಯಾಲಯದಲ್ಲಿ ಬಾಕಿ ಮೊತ್ತ ಪಾವತಿಗೆ ತಡೆಯಾಜ್ಞೆ ಪಡೆದ ಪ್ರಕರಣಗಳೆಷ್ಟು; ನ್ಯಾಯಾಲಯದ ಆದೇಶದ ಮೇರೆಗೆ ದಂಡದ ಮೊತ್ತವನ್ನು ಕಡಿತಗೊಳಿಸಲಾದ ಪ್ರಕರಣಗಳು ಎಷ್ಟು ? (ತಾಲ್ಲೂಕುವಾರು, ಪ್ರಕರಣವಾರು, ವಿವರ ನೀಡುವುದು)

-F-3 B/B

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿನ ಮುಜರಾಯಿ ವ್ಯಾಪ್ತಿಗೆ ಸೇರಿದ "ಎ" ಮತ್ತು "ಬಿ" ವರ್ಗದ ದೇವಸ್ಥಾನಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೫ (೧೭೪೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಟ್ಟ "ಎ" ಮತ್ತು "ಬಿ" ವರ್ಗದ ದೇವಸ್ಥಾನಗಳ ಸಂಖ್ಯೆ ಎಷ್ಟು; ಅವು ಯಾವುವು; (ಜಿಲ್ಲಾವಾರು, ತಾಲ್ಲೂಕುವಾರು, ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಟ್ಟ "ಎ" ಮತ್ತು "ಬಿ" ವರ್ಗದ ದೇವಸ್ಥಾನಗಳ ವಾರ್ಷಿಕ ಆದಾಯವೆಷ್ಟು; ಮತ್ತು ವೆಚ್ಚವೆಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ದೇವಸ್ಥಾನವಾರು ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಟ್ಟ "ಎ" ಮತ್ತು "ಬಿ" ವರ್ಗದ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಇವರಿಗೆ ಮಾಸಿಕ ನೀಡುತ್ತಿರುವ ವೇತನವೆಷ್ಟು ? (ಜಿಲ್ಲಾವಾರು, ತಾಲ್ಲೂಕುವಾರು, ದೇವಸ್ಥಾನವಾರು ಸಿಬ್ಬಂದಿಗಳ ಹೆಸರು, ವಿಳಾಸ ಹುದ್ದೆ ಸಹಿತ ವೇತನದ ವಿವರ ನೀಡುವುದು)

## ಬೆಂಗಳೂರು ನಗರ ಮತ್ತು ಗ್ರಾಮಾಂತರದಲ್ಲಿ ಬಿ.ಬಿ.ಎಂ.ಪಿ ಯಿಂದ ಸ್ವಚ್ಛತಾ ಕಾರ್ಯ ಕೈಗೊಳ್ಳುವುದು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೩೬ (೧೭೪೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಮತ್ತು ಗ್ರಾಮಾಂತರಗಳಲ್ಲಿ ಬಿ.ಬಿ.ಎಂ.ಪಿ.ಯಿಂದ ಸರಿಯಾದ ಸ್ವಚ್ಛತಾ ಕಾರ್ಯ ಕೈಗೊಳ್ಳದೆ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಯಾವ ಯಾವ ಪ್ರದೇಶಗಳಲ್ಲಿ ಈ ಒಂದು ಸಾಂಕ್ರಾಮಿಕ ರೋಗಗಳು ಹೆಚ್ಚಿನ ಸಂಖ್ಯೆಯಲ್ಲಿ ಹರಡುತ್ತಿದೆ;

(ಇ) ಸಾಂಕ್ರಾಮಿಕ ರೋಗಗಳ ಬಗ್ಗೆ ಜನರ ಮನವಿಗಳಿಗೆ ಸ್ಪಂದಿಸದ ಬೇಜವಾಬ್ದಾರಿ ತೋರಿದ ಅಧಿಕಾರಿ/ನೌಕರರು ಯಾರು; ಇಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ;

(ಈ) ಸೊಳ್ಳೆಗಳ ಔಷಧಿಯನ್ನು ಸಿಂಪಡಿಸುವ ಕಾರ್ಯದ ಜವಾಬ್ದಾರಿಯನ್ನು ಯಾರಿಗೆ ವಹಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಉ) ಈ ಸೊಳ್ಳೆಗಳ ಔಷಧಿಯನ್ನು ಸಿಂಪಡಿಸುವ ಕಾರ್ಯ ಸರಿಯಾದ ರೀತಿಯಲ್ಲಿ ಕಾರ್ಯಗತವಾಗದಿರುವುದು ಡೆಂಗ್ಯೂ ಇತರೆ ಸಾಂಕ್ರಾಮಿಕ ರೋಗ ಹರಡಲು ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ರಾಜ್ಯದಲ್ಲಿ ನಡೆಯುವ ಒಂದಂಕಿ ಲಾಟರಿ ದಂಧೆಯ ಕುರಿತು

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೩೭ (೧೭೯೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಒಂದಂಕಿ ಲಾಟರಿ ದಂಧೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಒಂದಂಕಿ ಲಾಟರಿಯಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಬೀದಿ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅನಧಿಕೃತವಾಗಿ ಈ ಒಂದಂಕಿ ಲಾಟರಿ ದಂಧೆಯನ್ನು ನಡೆಸುತ್ತಿರುವವರು ಯಾರು; ಇದುವರೆವಿಗೂ ಎಷ್ಟು ಜನರನ್ನು ಬಂಧಿಸಲಾಗಿದೆ;

(ಈ) ಒಂದಂಕಿ ಲಾಟರಿ ದಂಧೆಯನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಂಡಿದೆ ?

## ಸಕಾಲ ಯೋಜನೆ ಎಲ್ಲಾ ಇಲಾಖೆ ಸಚಿವಾಲಯಗಳಿಗೆ ವಿಸ್ತರಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೮ (೧೭೭೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ "ಸಕಾಲ ಯೋಜನೆ" ಅನ್ವಯ ಲಭ್ಯವಿರುವ ಒಟ್ಟು ಸೇವೆಗಳು ಎಷ್ಟು ಹಾಗೂ ಯಾವುವು; ಇವುಗಳನ್ನು ಪಡೆಯಲು

ಅನುಸರಿಸಬೇಕಾದ ವಿಧಾನವೇನು; (ಇಲಾಖಾವಾರು ಸೇವೆಗಳ ವಿವರ ನೀಡುವುದು)

(ಆ) ಯಾವ ಯಾವ ಇಲಾಖೆ ಮತ್ತು ಎಷ್ಟು ಸೇವೆಗಳು ಸಕಾಲ ವ್ಯಾಪ್ತಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆ;

(ಇ) ಇನ್ನೂ ಅನೇಕ ಇಲಾಖೆ ಹಾಗೂ ಹಲವಾರು ಸೇವೆಗಳು ಸಕಾಲ ವ್ಯಾಪ್ತಿಗೆ ತರದೇ ಇರುವುದರಿಂದ ಸಾರ್ವಜನಿಕರಿಗೆ ಸೇವಾ ಖಾತರಿ ನೀಡಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಈ) ಸರ್ಕಾರದ ಭರವಸೆಯಂತೆ, ವಿಧಾನ ಸೌಧದ ಕಛೇರಿಗಳು ಸಚಿವಾಲಯ, ಆಯುಕ್ತಾಲಯ, ನಿರ್ದೇಶನಾಲಯಗಳನ್ನು ಸಂಪೂರ್ಣವಾಗಿ "ಸಕಾಲ" ವ್ಯಾಪ್ತಿಗೆ ತರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಉ) "ಸಕಾಲ" ಯೋಜನೆ/ಕಾಯಿದೆಯನ್ನು ಎಲ್ಲಾ ಇಲಾಖೆಯ ಎಲ್ಲಾ ಸೇವೆಗೆ ವಿಸ್ತರಿಸಲು ಸರ್ಕಾರದ ಯೋಜನೆ, ಯೋಜನೆಗಳೇನು ? (ವಿವರ ನೀಡುವುದು)

## ಪೊಲೀಸ್ ಕಾನ್‌ಸ್ಟೇಬಲ್‌ಗಳಿಗೆ ವೇತನ ಹೆಚ್ಚಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೩೯(೧೭೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪೊಲೀಸ್ ಇಲಾಖೆಯಲ್ಲಿನ ವಿವಿಧ ಶ್ರೇಣಿಯ ಅಧಿಕಾರಿ/ಸಿಬ್ಬಂದಿಗೆ ನೀಡುತ್ತಿರುವ ವೇತನ ಶ್ರೇಣಿ, ಭತ್ಯೆ, ಸೌಲಭ್ಯಗಳೇನು ;

(ಆ) ಹಗಲಿರುಳು ದುಡಿಯುತ್ತಿರುವ ಪೊಲೀಸ್ ಕಾನ್‌ಸ್ಟೇಬಲ್‌ಗಳಿಗೆ ನೀಡುತ್ತಿರುವ ವೇತನ, ಸೌಲಭ್ಯಗಳು ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಇ) ಪೊಲೀಸ್ ಕಾನ್‌ಸ್ಟೇಬಲ್‌ಗಳಿಗೆ ಈಗ ನೀಡುತ್ತಿರುವ ಕ್ಯಾಪ್ ಬದಲಾವಣೆಗೆ ಸಿಬ್ಬಂದಿಗಳು ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಧರಿಸಲು ಸುಲಭವಾಗುವ ಕ್ಯಾಪ್ ವಿತರಣೆಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಸಮಾಜದ ಶಾಂತಿ ಸುವ್ಯವಸ್ಥೆ ಕಾಪಾಡುವ ಮತ್ತು ಹಗಲಿರುಳು ದುಡಿಯುವ ಪೊಲೀಸ್ ಕಾನ್‌ಸ್ಟೇಬಲ್‌ಗಳಿಗೆ ಉತ್ತಮ ವೇತನ ಸೌಲಭ್ಯ ಒದಗಿಸುವುದರೊಂದಿಗೆ, ಉತ್ತಮ ಗುಣಮಟ್ಟದ ಪರಿಕರ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕರಾವಳಿಯಲ್ಲಿ ಕೈಗಾರಿಕೆ ಸ್ಥಾಪನೆಗೆ ಪ್ರೋತ್ಸಾಹ ಮತ್ತು ಉದ್ಯೋಗ ಸೃಷ್ಟಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೦ (೧೭೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದ ಹೊಸ ಉದ್ಯಮಿಗಳಿಗೆ ಯಾವ ರೀತಿಯ ಪ್ರೋತ್ಸಾಹ ನೀಡಲಾಗುತ್ತದೆ ;

(ಆ) ರಾಜ್ಯದ ಕರಾವಳಿ ಜಿಲ್ಲೆಗಳಾದ ಮಂಗಳೂರು, ಉಡುಪಿ ಜಿಲ್ಲೆಗಳಲ್ಲಿ ಕೈಗಾರಿಕೆಗೆ ಪೂರಕವಾದ ಅಂಶಗಳಿದ್ದರೂ ಸರ್ಕಾರದಿಂದ ವಿಶೇಷ

ಆದ್ಯತೆಗಳಿಲ್ಲದೆ ಹೊಸ ಕೈಗಾರಿಕೆಗಳು ಸ್ಥಾಪನೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕರಾವಳಿಯ ಉಡುಪಿ ಮಂಗಳೂರು ಪ್ರದೇಶಗಳಲ್ಲಿ ಹೊಸ ಕೈಗಾರಿಕೆ ಸ್ಥಾಪಿಸಿ ಪ್ರೋತ್ಸಾಹಿಸಲು ಹಾಗೂ ಉದ್ಯೋಗ ಸೃಷ್ಟಿಗಾಗಿ ಸರ್ಕಾರ ಯಾವ ಯೋಜನೆ ಹಮ್ಮಿಕೊಂಡಿದೆ ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರು ಪೋಲಾಗುತ್ತಿರುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪೧ (೧೭೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸರಬರಾಜಾಗುತ್ತಿರುವ ಕುಡಿಯುವ ನೀರಿನಲ್ಲಿ ಶೇ. ೪೦ರಷ್ಟು ಪ್ರಮಾಣ ಸೋರಿಕೆಯಾಗಿ ಪೋಲಾಗುತ್ತಿರುವುದು ನಿಜವೇ ;

(ಆ) ಹಾಗಿದ್ದಲಿ, ಈ ನಿಟ್ಟಿನಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕುಡಿಯಲು ನೀರು ಪಡೆಯಲು ಸಾವಿರಾರು ಕುಟುಂಬಗಳು ಕಷ್ಟ ಪಡುತ್ತಿದ್ದು, ಬಿಲ್ಡರ್‌ಗಳ ಕಟ್ಟಡ ನಿರ್ಮಾಣಕ್ಕೆ ಅಕ್ರಮವಾಗಿ ನೀರು ಸರಬರಾಜು ಆಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳುವ ಕ್ರಮವೇನು ;

(ಈ) ಒಟ್ಟಾರೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಸರಬರಾಜು ಅವ್ಯವಸ್ಥೆಯನ್ನು ಸರಿಪಡಿಸುವುದು ಹಾಗೂ ನೀರಿನ ಪೋಲು ತಡೆಯಲು ವೈಜ್ಞಾನಿಕವಾಗಿ ಸರ್ಕಾರ ಕೈಗೊಳ್ಳುವ ಯೋಜನೆಗಳಾವುವು ? (ವಿವರ ನೀಡುವುದು)

## B.B.M.P ಯಲ್ಲಿನ ಅವ್ಯವಹಾರದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೨ (೧೭೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಸ್ವೇಚ್ಛಾಚಾರಿ ತನದ ಗುತ್ತಿಗೆ ಹಂಚಿಕೆ ಹಾಗೂ ಕಳಪೆ ಕಾಮಗಾರಿ ಬಗ್ಗೆ ಲೆಕ್ಕ ಪರಿಶೋಧನೆಯಲ್ಲಿ ನಿರಂತರ ಆಕ್ಷೇಪಣೆಗಳು ಹಾಗೂ ಕೊಟ್ಯಾಂತರ ರೂಪಾಯಿ ಅಕ್ರಮ ನಡೆದಿರುವುದು ನಿಜವೆ ;

(ಆ) ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಸದರಿ ಅವ್ಯವಹಾರ ತಡೆಯಲು ಸರ್ಕಾರದ ಮಾರ್ಗಸೂಚಿಗಳೇನು ; ಹಾಗೂ ಅಕ್ರಮಕ್ಕೆ ಕಾರಣರಾದ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ತೆಗೆದು ಹಾಕಲು ಕೈಗೊಂಡ ಕ್ರಮವೇನು ?

## ೨೦೧೩-೧೪, ೨೦೧೪-೧೫ರಲ್ಲಿ ಬೆಂಗಳೂರು ಮಹಾನಗರದಲ್ಲಿ ನಿರ್ಮಾಣ ಮಾಡಿರುವ ಮನೆಗಳ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೩ (೧೭೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಿಂದ ೨೦೧೪-೧೫ನೇ ಸಾಲಿನವರೆಗೆ ಬೆಂಗಳೂರು ಮಹಾನಗರದಲ್ಲಿ ಬಡವರಿಗಾಗಿ ಎಷ್ಟು ಮನೆಗಳನ್ನು ಯಾವ ಯಾವ ಯೋಜನೆಯಡಿಯಲ್ಲಿ ನಿರ್ಮಾಣ ಮಾಡಲಾಗಿದೆ; ಬಡವರಿಗಾಗಿ (ಸ್ಲಂಗಳಲ್ಲಿ) ನಿರ್ಮಾಣ ಮಾಡಿಕೊಟ್ಟಿರುವ ಮನೆಗಳ ಸಂಖ್ಯೆ ಎಷ್ಟು ; ಈ ಮನೆಗಳಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ; (ಪ್ರತಿ ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ವಿಜಯನಗರ ವಿಧಾನಸಭಾ ಕ್ಷೇತ್ರದ ದೀಪಾಂಜಲಿ ನಗರದ ಕೆರೆ ಅಭಿವೃದ್ಧಿಗಾಗಿ ಬಿ.ಬಿ.ಎಂ.ಪಿ ವತಿಯಿಂದ ಅಥವಾ ಇತರೆ ಮೂಲಗಳಿಂದ ಬಿಡುಗಡೆ ಮಾಡಿದ ಹಣವೆಷ್ಟು ; ಯಾವಾಗ ಹಣ ಬಿಡುಗಡೆ ಮಾಡಲಾಯಿತು ; ಕೆರೆ ಅಭಿವೃದ್ಧಿ ಕಾರ್ಯ ಪೂರ್ಣಗೊಂಡಿರುವುದೇ ; (ವಿವರ ನೀಡುವುದು)

(ಇ) ಮೈಸೂರು ರಸ್ತೆ ಕ.ವಿ.ಕಾ ಬಳಿ ಹಂಪಿನಗರ ವಾರ್ಡ್‌ನಲ್ಲಿ ವೃಷಭಾವತಿ ಸೇತುವೆ ಅಗಲೀಕರಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಯಿತು; ಇದಕ್ಕೆ ಬಿಡುಗಡೆ ಮಾಡಿದ ಹಣವೆಷ್ಟು ; ಯಾವ ಯಾವ ವರ್ಷದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಮೈಸೂರು ರಸ್ತೆ ಶ್ರೀ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನಕ್ಕೆ ಪ್ರತಿ ಮಳೆಗಾಲದಲ್ಲಿ ಮೋರಿ ನೀರು ಬಂದು ಕಲುಷಿತಗೊಳ್ಳುತ್ತಿದ್ದು ಸ್ಯಾಟಲೈಟ್ ಬಸ್ ನಿಲ್ದಾಣದ ಕಡೆಯಿಂದ ಹರಿಯುವ ರಾಜಕಾಲುವೆ ನೀರನ್ನು ನೇರವಾಗಿ ಮೈಸೂರು ರಸ್ತೆ ಮುಖೇನ ಕ.ವಿ.ಕಾ ಫ್ಯಾಕ್ಟರಿ ಮುಂಭಾಗದಿಂದ ವೃಷಭಾವತಿ ನದಿಗೆ ಸೇರಿಸಲು ಸರ್ಕಾರ ಹೇಳಿದ್ದು, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು; ಈ ಯೋಜನೆಗಾಗಿ ಕಾಯ್ದಿರಿಸಿರುವ ಹಣವೆಷ್ಟು; ಕಲುಷಿತ ನೀರು ದೇವಸ್ಥಾನಕ್ಕೆ ಬರದಂತೆ ತೆಗೆದುಕೊಂಡಿರುವ ಕ್ರಮವೇನು ?

## ಕಟ್ಟಡದ ಕಲ್ಲು ಸುಣ್ಣದ ಚಿಪ್ಪು ಪರವಾನಿಗೆಯ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೪೪ (೧೭೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಿಂದ ೨೦೧೪-೧೫ನೇ ಸಾಲಿನವರೆಗೆ ಕಟ್ಟಡದ ಕಲ್ಲು ಹಾಗೂ ಸುಣ್ಣದ ಚಿಪ್ಪನ್ನು ಪರವಾನಿಗೆ ಪಡೆದು ರಾಜಧನ ಸಲ್ಲಿಸಿ ಸಾಗಾಣೆ ಮಾಡಿದ್ದು ಇದರಿಂದ ಸರ್ಕಾರಕ್ಕೆ ಎಷ್ಟು ಹಣ ಬಂದಿದೆ ; (ಬೆಂಗಳೂರು ಗ್ರಾಮಾಂತರ, ರಾಮನಗರ, ಬಾಗಲಕೋಟೆ ಹಾಗೂ ಮಂಡ್ಯ ಜಿಲ್ಲೆಗಳ ವಿವರ ನೀಡುವುದು)

(ಆ) ರಾಜಧನ ನೀಡದೆ ಪರವಾನಿಗೆ ಪಡೆಯದೆ ಅಕ್ರಮವಾಗಿ ಸಾಗಿಸುವವರನ್ನು ಬಂಧಿಸಿ ಅವರ ಮೇಲೆ ಕೇಸ್ ದಾಖಲಿಸಲಾಗಿದೆಯೇ ; ದಂಡದ ರೂಪದಲ್ಲಿ ಅವರಿಂದ

ಸರ್ಕಾರಕ್ಕೆ ಬಂದಿರುವ ಹಣ ಎಷ್ಟು ? (ಪೂರ್ಣ ವಿವರ ನೀಡುವುದು)

## ತಂಬಾಕು ಬೆಳೆಯುವ ಬದಲು ರೇಷ್ಮೆ ಬೆಳೆಯುವ ರೈತರಿಗೆ ಹೆಚ್ಚುವರಿ ಸಹಾಯ ನೀಡುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೩೪೫ (೧೭೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಂಬಾಕು ಬೆಳೆ ಬೆಳೆಯುತ್ತಿರುವ ಜಮೀನುಗಳಲ್ಲಿ ರೇಷ್ಮೆ ಬೆಳೆಯನ್ನು ಬೆಳೆಯಲು ಸಾಧ್ಯವೇ ;

(ಆ) ತಂಬಾಕು ಬೆಳೆಯ ಬದಲು ರೇಷ್ಮೆಯನ್ನು ಬೆಳೆಯಬಹುದಾದಲ್ಲಿ ಅಂತಹ ರೈತರುಗಳಿಗೆ ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ ;

(ಇ) ತಂಬಾಕು ಬೆಳೆಯುತ್ತಿದ್ದ ಎಷ್ಟು ಮಂದಿ ರೈತರು ಎಷ್ಟು ಎಕರೆಯಷ್ಟು ತಂಬಾಕು ಬೆಳೆಯುವುದನ್ನು ನಿಲ್ಲಿಸಿ ಇತರೆ ಬೆಳೆ ಬೆಳೆಯಲು ಪ್ರಾರಂಭಿಸಿರುತ್ತಾರೆ ; (ಕಳೆದ ಎರಡು ವರ್ಷಗಳ ವಿವರ ನೀಡುವುದು)

(ಈ) ತಂಬಾಕು ಬೆಳೆಯುವುದನ್ನು ಬಿಟ್ಟು ರೇಷ್ಮೆ ಬೆಳೆಯುವ ರೈತರಿಗೆ ವಿಶೇಷವಾಗಿ ಯಾವ ರೀತಿಯ ಹೆಚ್ಚುವರಿ ಸಹಾಯ ಮಾಡಲು ಸರ್ಕಾರ ಮುಂದಾಗುವುದು ?

## ಇಂಟರ್‌ನೆಟ್ ಜಾಲತಾಣಗಳ ಮೂಲಕ ಹಳೇ ವಾಹನ ಮಾರುವ ಜಾಹೀರಾತು ನೀಡಿ ಹಣ ಪಡೆದು ವಂಚಿಸುತ್ತಿರುವ ವಂಚಕರ ತಂಡವನ್ನು ಶಿಕ್ಷಿಸುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೩೪೬ (೧೭೫೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಳೇ ವಸ್ತು ಮಾರಾಟ ಮಾಡುವ ಇಂಟರ್‌ನೆಟ್ ಜಾಲತಾಣಗಳಾದ ಓಎಲ್‌ಎಕ್ಸ್ ಮತ್ತು ಕ್ವಿಕ್‌ರ್‌ಗಳಲ್ಲಿ ಭಾರಿ ಬೆಲೆಯ ಕಾರುಗಳನ್ನು ಕಡಿಮೆ ಬೆಲೆಗೆ ನೀಡುವ ಕುರಿತು ಜಾಹೀರಾತು ನೀಡಿ, ಇದನ್ನು ನಂಬಿದ ಜನರನ್ನು ವಂಚಿಸಿ, ಕಾರನ್ನು ನೀಡದೆ ಹಣ ಪಡೆದು ಪರಾರಿಯಾಗುವ ವಂಚಕರ ತಂಡ ರಾಜ್ಯದಲ್ಲಿ ಸಿಕ್ಕಿಹಾಕಿಕೊಂಡಿರುವುದು ನಿಜವೇ; ಕಳೆದೆರಡು ವರ್ಷಗಳಿಂದ ಈ ರೀತಿಯ ಯಾವ ಯಾವ ಪ್ರಕರಣಗಳು ಇಲಾಖೆಯಲ್ಲಿ ದಾಖಲಾಗಿದೆ ; (ವಿವರ ನೀಡುವುದು)

(ಆ) ಇವರಿಂದ ವಂಚನೆಗೆ ಒಳಗಾಗಿ ಹಣ ಕಳೆದುಕೊಂಡವರ ಒಟ್ಟು ಮೊತ್ತವೆಷ್ಟು ;

(ಇ) ಇವರನ್ನು ರಾಜ್ಯದಿಂದಲೇ ಗಡೀಪಾರು ಮಾಡಲು ಸಾಧ್ಯವಿಲ್ಲವೇ ;

(ಈ) ಈ ವಂಚಕರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಪುಟ್ಟಣ್ಣ ಚೆಟ್ಟಿ ಪುರಭವನ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೩೪೭ (೧೭೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ಬೆಂಗಳೂರು ನಗರದ ಸರ್ ಪುಟ್ಟಣ್ಣ ಚೆಟ್ಟಿ ಪುರಭವನವನ್ನು ನವೀಕೃತವಾದ ನಂತರ ಅದರ ಬಾಡಿಗೆ ಹೆಚ್ಚಿಸಿರುವುದು ನಿಜವೇ;

(ಆ) ನವೀಕೃತವಾಗುವ ಮೊದಲು ಇದ್ದ ಬಾಡಿಗೆ ಎಷ್ಟು; ನಂತರ ಹೆಚ್ಚಿಸಿರುವ ಬಾಡಿಗೆ ಎಷ್ಟು ; ಬಾಡಿಗೆ ಹೆಚ್ಚಿಸಲು ಕಾರಣಗಳೇನು ;

(ಇ) ಹೆಚ್ಚಾಗಿ ಯಾವ ರೀತಿ ಕಾರ್ಯಕ್ರಮಗಳು ಇಲ್ಲಿ ನಡೆಯುತ್ತವೆ ;

(ಈ) ಸಾಂಸ್ಕೃತಿಕ ಕಾರ್ಯಕ್ರಮಗಳು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಕಾರ್ಯಕ್ರಮಗಳು ಶಾಲಾ ಮಕ್ಕಳ ಕುರಿತ ಸಮಾರಂಭಗಳಿಗೆ ಬಾಡಿಗೆಯಲ್ಲಿ ರಿಯಾಯಿತಿ ನೀಡಲು ಸರ್ಕಾರ ಮುಂದಾಗುವುದೇ ;

(ಉ) ರಿಯಾಯಿತಿ ನೀಡಲು ಸಾಧ್ಯವಿಲ್ಲವಾದರೆ ಕಾರಣವೇನು ?

## ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷೆಯ ಫಲಿತಾಂಶ ಪ್ರಕಟಣೆಯಲ್ಲಿ ವಿಳಂಬವಾಗುತ್ತಿರುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೩೪೮ (೧೭೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಸಾಲಿನ ಪೊಲೀಸ್ ಕಾನ್ಸ್‌ಟೇಬಲ್ ಪರೀಕ್ಷೆ ನಡೆಸಿರುವುದು ನಿಜವೇ; ನಡೆಸಿದ್ದಲ್ಲಿ ಯಾವಾಗ ನಡೆಸಲಾಯಿತು ;

(ಆ) ಪರೀಕ್ಷೆ ನಡೆಸಿದ ನಂತರ ಫಲಿತಾಂಶ ಪ್ರಕಟಣೆಯ ದಿನಾಂಕ ಗೊತ್ತುಪಡಿಸಲಾಗಿತ್ತೇ ; (ವಿವರ ನೀಡುವುದು)

(ಇ) ಫಲಿತಾಂಶ ಪ್ರಕಟಣೆಯಲ್ಲಿ ವಿಳಂಬವಾಗಿರುವುದು ನಿಜವೇ; ಇದಕ್ಕೆ ಕಾರಣವೇನು ;

(ಈ) ಫಲಿತಾಂಶ ಯಾವಾಗ ಪ್ರಕಟಿಸಲಾಗುವುದು ?

## ಮಂಡ್ಯ ನಗರದ ಉದ್ಯಾನವನ ನಿರ್ವಹಣೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೪೯ (೧೭೫೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ನಗರದಲ್ಲಿರುವ ಉದ್ಯಾನವನಗಳೆಷ್ಟು; ಈ ಉದ್ಯಾನವನಗಳ ನಿರ್ವಹಣೆಯನ್ನು ಯಾವ ಇಲಾಖೆಯವರು ನಿರ್ವಹಿಸುತ್ತಿದ್ದಾರೆ ;

(ಆ) ಈ ಉದ್ಯಾನವನಗಳ ನಿರ್ವಹಣೆ, ಸ್ವಚ್ಛತೆ ಮಾಡಲು ಸಾಕಷ್ಟು ಸಿಬ್ಬಂದಿಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕ್ರಮ ಕೈಗೊಳ್ಳುವುದಾದರೆ ಯಾವಾಗ ಎಷ್ಟು ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ಮಂಡ್ಯ ವಿವೇಕಾನಂದನಗರ ಬಡಾವಣೆಯ ಕುರಿತು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೫೦ (೧೭೬೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ವಿವೇಕಾನಂದನಗರ ಬಡಾವಣೆಯಲ್ಲಿ ೨೦೦೩ರಲ್ಲಿ ನಿವೇಶನಗಳನ್ನು ಹಂಚಿರುವುದು ಸರಿಯೆಷ್ಟೆ ;

(ಆ) ಈ ಬಡಾವಣೆಯಲ್ಲಿ ಇದುವರೆವಿಗೂ ಯಾವುದೇ ಮೂಲಭೂತ ಸೌಕರ್ಯಗಳನ್ನು ಒದಗಿಸದಿರಲು ಕಾರಣವೇನು; ಈ ಬಡಾವಣೆಯ ಖಾಲಿ ನಿವೇಶಗಳಲ್ಲಿ ಗಿಡಗೆಂಟೆಗಳು ಬೃಹದಾಕಾರವಾಗಿ ಬೆಳೆದುಕೊಂಡು ವಿಷಕಾರಿ ಜಂತುಗಳು ವಾಸ ಮಾಡುವ ಸ್ಥಾನವಾಗಿರುವುದು ತಿಳಿದಿದೆಯೇ ;

(ಇ) ಈ ಬಡಾವಣೆಯಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವವರಿಗೆ ತೊಂದರೆಯಾಗಿದ್ದು ಬೃಹದಾಕಾರವಾಗಿ ಬೆಳೆದಿರುವಂತಹ ಗಿಡಗೆಂಟೆಗಳನ್ನು ತೆಗೆದು ಅನುಕೂಲ ಮಾಡಿಕೊಡಲಾಗುವುದೆ ;

(ಈ) ಸದರಿ ಬಡಾವಣೆಯ ಕೊಬ್ಬರಿಮಂಡಿಯಿಂದ ಬೀಡಿಕಾರ್ಮಿಕರ ಕಾಲೋನಿಗೆ ಹೋಗುವ ಮುಖ್ಯರಸ್ತೆಯಲ್ಲಿ ಮತ್ತು ಅಕ್ಕಪಕ್ಕದ ರಸ್ತೆಗಳಲ್ಲಿ ವಿದ್ಯುತ್ ದೀಪಗಳು ಇಲ್ಲದೆ ಸದರಿ ಬಡಾವಣೆಯಲ್ಲಿ ಓಡಾಡುವಂತಹ ಸ್ಥಳೀಯರಿಗೂ ತೊಂದರೆಯಾಗಿರುವುದಲ್ಲದೆ

ಒಳಚರಂಡಿ ಮತ್ತು ಕಾವೇರಿ ನೀರಿನ ಸೌಲಭ್ಯ ಹಾಗೂ ಮೂಲಭೂತ ಸೌಕರ್ಯವನ್ನು ಸರ್ಕಾರ ಯಾವಾಗ ಒದಗಿಸಿ ಕೊಡಲಾಗುವುದು ?

**ಪೊಲೀಸ್ ಸಿಬ್ಬಂದಿಯ ಸಮವಸ್ತ್ರದ ಹೊಲಿಗೆ ದರ ಹೆಚ್ಚಿಸುವ ಬಗ್ಗೆ**

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೫೧ (೧೭೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರಕ್ಷಕ ಇಲಾಖೆಯ ಪೊಲೀಸ್ ಸಿಬ್ಬಂದಿಯವರಿಗೆ ಸಮವಸ್ತ್ರವನ್ನು ನೀಡಲಾಗುತ್ತಿದೆಯೇ ;

(ಆ) ಒಬ್ಬ ಪೊಲೀಸ್ ಸಿಬ್ಬಂದಿಗೆ ಎಷ್ಟು ಜೊತೆ ಸಮವಸ್ತ್ರವನ್ನು ನೀಡಲಾಗುತ್ತಿದೆ ;

(ಇ) ಒಂದು ಜೊತೆ ಸಮವಸ್ತ್ರವನ್ನು ಹೊಲಿಯಲು ಕೇವಲ ರೂ. ೧೬೦ ರಿಂದ ೧೮೦/-ಗಳ ಮಜೂರಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಪ್ರಸ್ತುತ ಮಾರುಕಟ್ಟೆ ಬೆಲೆ ರೂ. ೧೦೦೦/- ನೀಡಲು ಸರ್ಕಾರಕ್ಕೆ ಇರುವ ತೊಂದರೆಯೇನು ? (ಪೂರ್ಣ ಮಾಹಿತಿ ನೀಡುವುದು)

## ಮಂಡ್ಯದಲ್ಲಿ ಉಪನಗರ ನಿರ್ಮಿಸುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೫೨ (೧೭೭೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ನಗರದಲ್ಲಿ ಜನಸಂದಣಿ ಹೆಚ್ಚಾಗುತ್ತಿರುವುದರಿಂದ ನಗರದ ಅಕ್ಕಪಕ್ಕದಲ್ಲಿ ಉಪನಗರ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಉಪನಗರ ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಲಾಗಿದೆಯೇ ;

(ಇ) ಗುರುತಿಸಲಾಗಿದ್ದರೆ ಸ್ಥಳ ಯಾವುದು ? (ವಿವರವಾದ ಮಾಹಿತಿ ನೀಡುವುದು)

## ಸಾರ್ವಜನಿಕ ಉದ್ಯಮಗಳ ಲಾಭ ನಷ್ಟದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :-**

೧೩೫೩ (೧೭೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಒಂದು ಸಾರ್ವಜನಿಕ ಉದ್ಯಮದ ಕಳೆದ ೩ ವರ್ಷಗಳ ಸರಾಸರಿ ಲಾಭವು, ಉದ್ಯಮದ ಒಟ್ಟು ಸವಕಳಿ ನಷ್ಟದ ಶೇ ೩೦ಕ್ಕಿಂತ ಹೆಚ್ಚಿದ್ದರೆ ಅನುಕಂಪ ಆಧಾರದ ಹುದ್ದೆಗಳನ್ನು ನೇಮಕ ಮಾಡಬಹುದು ಎಂಬುದಾಗಿ ಸರ್ಕಾರ ಸುತ್ತೋಲೆ ಹೊರಡಿಸಿರುವುದು ನಿಜವೇ ;

F-4 B/B

(ಆ) ಹಾಗಿದ್ದರೆ, ಈ ವ್ಯಾಖ್ಯಾನದಡಿ ರಾಜ್ಯದ ಎಷ್ಟು ಉದ್ಯಮಗಳು ೨೦೦೦ನೇ ಸಾಲಿನಿಂದ ಇಲ್ಲಿಯವರೆಗೆ ಶೇ ೩೦ಕ್ಕಿಂತ ಹೆಚ್ಚಿಗೆ ಲಾಭಗಳಿಸಿವೆ ; (ವರ್ಷಾವಾರು ವಿವರ ನೀಡುವುದು)

(ಇ) ಈ ಸುತ್ತೋಲೆ ಉದ್ಯಮದ ನೇರ ನೇಮಕಾತಿಗಳಿಗೆ ಅನ್ವಯಿಸುತ್ತದೆಯೇ; ಇಲ್ಲವೇ ; (ವಿವರಣೆ ನೀಡುವುದು)

(ಈ) ಅನುಕಂಪ ಆಧಾರದ ನೇಮಕಾತಿ ಪ್ರಕರಣಗಳು ಬಾಕಿ ಇರುವುದೇ; ಎಷ್ಟು ಉದ್ಯಮಗಳು ನೇರ ನೇಮಕಾತಿಗಳನ್ನು ಮಾಡಿಕೊಂಡಿವೆ ; (ವಿವರವಾದ ಮಾಹಿತಿ ನೀಡುವುದು)

(ಉ) ಯಾವ ಕಾಲಮಿತಿಯಲ್ಲಿ ಸಾರ್ವಜನಿಕ ಉದ್ಯಮಗಳು ವ್ಯಾಖ್ಯಾನದ ಶೇ. ೩೦ಕ್ಕಿಂತ ಹೆಚ್ಚು ಲಾಭ ಗಳಿಸುತ್ತವೆ ?

## ದಕ್ಷಿಣ ಕನ್ನಡ ಜಿಲ್ಲೆಯ ಸೂರತ್ಕಲ್‌ನಲ್ಲಿರುವ ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ವಿವರ

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೩೫೪ (೧೭೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಸೂರತ್ಕಲ್‌ನಲ್ಲಿರುವ MRPL,HPCL,BPCL,Cardolite, OMPL & BSF ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೇರ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಈ ಹುದ್ದೆಗಳಲ್ಲಿ ಸ್ಥಳೀಯ ಭೂ ಸಂತ್ರಸ್ಥರಿಗೆ

ನೀಡಿದ ಹುದ್ದೆಗಳೆಷ್ಟು ; ಕನ್ನಡಿಗರಿಗೆ ನೀಡಿದ ಹುದ್ದೆಗಳೆಷ್ಟು; (ಕಂಪನಿವಾರು ವಿವರ ನೀಡುವುದು)

(ಆ) ಪ್ರಸ್ತುತ ಕಂಪನಿಗಳಿಗೆ ಸರ್ಕಾರದಿಂದ ನೀಡಿದ ಭೂಮಿ ಎಷ್ಟು ;

(ಇ) ಈ ಕಂಪನಿಗಳ ವಿಸ್ತರಣೆಗಾಗಿ ಬಳಸಿಕೊಂಡಿರುವ ಭೂಮಿಯ ವಿಸ್ತೀರ್ಣ ಎಷ್ಟು ? (ವಿವರ ನೀಡುವುದು)

## ಮಂಗಳೂರಿನ ಕಾರಾಗೃಹಗಳನ್ನು ಸ್ಥಳಾಂತರಿಸುವುದು

**ಶ್ರೀ ಐವನ್ ಡಿಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೩೫೫ (೧೭೬೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ಕಾರಾಗೃಹ ಸ್ಥಳಾಂತರಿಸಬೇಕೆಂಬ ಪ್ರಸ್ತಾವನೆಯು ಯಾವ ಹಂತದಲ್ಲಿದೆ; ಸರ್ಕಾರವು ಎಷ್ಟು ಎಕರೆ ಜಾಗವನ್ನು ಗುರುತಿಸಲಾಗಿದೆ ; ಯಾವಾಗ ಸ್ಥಳಾಂತರಿಸಲಾಗುವುದು ;

(ಆ) ಕಾರಾಗೃಹದಲ್ಲಿ ಜಾಮರ್ ಅಳವಡಿಸದೇ ಆರೋಪಿಗಳು ಯೇತೆಚ್ಛವಾಗಿ ಮೊಬೈಲ್ ಪೋನ್ ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಇ) ಮಂಗಳೂರು ಕಾರಾಗೃಹದಲ್ಲಿ ಎಷ್ಟು ಖೈದಿಗಳಿಗೆ ಪ್ರವೇಶ ನೀಡಲು ಅವಕಾಶ ಇದೆ ; ಪ್ರಸ್ತುತ ಇರುವ ಖೈದಿಗಳ ಸಂಖ್ಯೆ ಎಷ್ಟು ;

(ಈ) ಮಂಗಳೂರು ಕಾರಾಗೃಹದಲ್ಲಿರುವ ಮಹಿಳೆಯರ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ ನಡೆದ ಪ್ರಕರಣಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೩೫೬ (೧೭೬೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ ೨೦೧೪ನೇ ಸಾಲಿನಿಂದ ಇಲ್ಲಿವರೆಗೆ ರಾಜ್ಯದಲ್ಲಿ ಮಹಿಳೆಯರ ಮೇಲೆ ಅತ್ಯಾಚಾರ ಮತ್ತು ಅತ್ಯಾಚಾರವೆಸಗಿ ಕೊಲೆ ಮಾಡಿರುವ ಬಗ್ಗೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಅಂತಿಮ ವರದಿ ಸಲ್ಲಿಸಿದ ಪ್ರಕರಣಗಳೆಷ್ಟು; ದೋಷಮುಕ್ತಗೊಂಡ ಪ್ರಕರಣಗಳೆಷ್ಟು ; ಶಿಕ್ಷೆಗೆ ಒಳಗಾದ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಆ) ಮಹಿಳೆಯರ ಮೇಲಿನ ಅಪರಾಧಗಳನ್ನು ತನಿಖೆ ನಡೆಸಲು ಎಷ್ಟು ವಿಶೇಷ ನ್ಯಾಯಾಲಯಗಳನ್ನು ರಾಜ್ಯದಲ್ಲಿ ಸ್ಥಾಪಿಸಲಾಗಿದೆ ; ಈ ನ್ಯಾಯಾಲಯಗಳಲ್ಲಿ ಸಾಕ್ಷಿಗಳಿಗೆ ಪ್ರತ್ಯೇಕ ಕೊಠಡಿಗಳನ್ನು ವ್ಯವಸ್ಥೆಗೊಳಿಸಲಾಗಿದೆಯೇ ; (ವಿವರ ನೀಡುವುದು)

(ಇ) ೨೦೧೨-೧೩ ಮತ್ತು ೨೦೧೩-೧೪ನೇ ಸಾಲಿನಲ್ಲಿ ಮಹಿಳೆಯರ ಮೇಲೆ ದೌರ್ಜನ್ಯವೆಸಗಿ ಭಾಗಿಯಾದವರ ಮೇಲೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ?

# ದಕ್ಷಿಣ ಕನ್ನಡ ಜಿಲ್ಲೆಯ ಕೊಯಿಲಾದಲ್ಲಿ ಪಶು ವೈದ್ಯಕೀಯ ಕಾಲೇಜು ಸ್ಥಾಪನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):-**

೧೩೫೭ (೧೭೬೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಕೊಯಿಲಾದಲ್ಲಿ ಪಶು ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕೆಂಬ ಪ್ರಸ್ತಾವನೆ ಕಾರ್ಯಗತಗೊಳ್ಳದೇ ಇರಲು ಕಾರಣವೇನು; ಯಾವಾಗ ಪ್ರಾರಂಭಿಸಲಾಗುವುದು ;

(ಆ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳಿಗೆ ಪಶು ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ನೀಡಲಾಗುವುದು ; ಈ ಪಶು ವೈದ್ಯಕೀಯ ಕಾಲೇಜುಗಳಲ್ಲಿ ಕಲಿಯುತ್ತಿರುವ ಓರ್ವ ವಿದ್ಯಾರ್ಥಿಗೆ ಪದವಿ ಪಡೆಯುವ ತನಕ ತಗಲುವ ಖರ್ಚು ಎಷ್ಟು ;

(ಇ) ರಾಜ್ಯದಲ್ಲಿ ಪಶು ವೈದ್ಯಾಧಿಕಾರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಪಶು ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ವೈನ್‌ಶಾಪ್ ಮತ್ತು ಬಾರ್‌ಗಳಲ್ಲಿ ರಾತ್ರಿ ೧೨ ಗಂಟೆವರೆಗೆ ಕಾರ್ಯನಿರ್ವಹಿಸುತ್ತಿರುವ ಕುರಿತು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):-**

೧೩೫೮ (೧೭೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವೈನ್‌ಶಾಪ್ ಮತ್ತು ಬಾರ್‌ಗಳು ಬೆಳಿಗ್ಗೆ ೬ ಗಂಟೆಗೆ ತೆರೆದು ರಾತ್ರಿ ೧೨ ಗಂಟೆವರೆಗೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕಾನೂನು ಉಲ್ಲಂಘಿಸಿದವರ ವಿರುದ್ಧ ಕೇಸು ದಾಖಲಿಸಲಾಗಿದೆಯೇ ; ೨೦೧೪ ರಿಂದ ಇಲ್ಲಿಯವರೆಗೆ ದಾಖಲಿಸಿದ ಕೇಸುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಾನೂನು ಉಲ್ಲಂಘಿಸಿ ಬಾರ್‌ಗಳಂತೆ ಕಾರ್ಯನಿರ್ವಹಿಸುತ್ತಿರುವ ವೈನ್ ಶಾಪ್‌ಗಳ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಬಹುತೇಕ ವೈನ್ ಶಾಪ್‌ಗಳು ಬಾರ್‌ಗಳಂತೆ ಕಾರ್ಯನಿರ್ವಹಿಸುತ್ತಿದ್ದು ಇವುಗಳ ಮೇಲೆ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು ; ಈ ರೀತಿ ವ್ಯವಹಾರ ನಡೆಸುವುದರಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾಗುವ ನಷ್ಟ ಎಷ್ಟು ;

(ಈ) ಅಪ್ರಾಪ್ತ ವಯಸ್ಸಿನವರಿಗೆ ಬಾರ್/ವೈನ್‌ಶಾಪ್‌ಗಳಲ್ಲಿ ಪ್ರವೇಶ ನೀಡಕೂಡದೆಂದು ನಿಯಮವು ಇದ್ದರೂ, ಅದನ್ನು ಉಲ್ಲಂಘಿಸುತ್ತಿರುವ ಬಾರ್/ವೈನ್‌ಶಾಪ್‌ಗಳ ಮೇಲೆ ಸರ್ಕಾರವು ಕೈಗೊಳ್ಳುವ ಕ್ರಮವೇನು ?

## ಸಣ್ಣ ಕೈಗಾರಿಕೆ ಕ್ಷೇತ್ರದಲ್ಲಿನ ಪ್ರಾದೇಶಿಕ ಅಸಮತೋಲನವನ್ನು ಸರಿದೂಗಿಸುವುದು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೫೯ (೧೭೬೮) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಸಣ್ಣ ಕೈಗಾರಿಕೆಗಳ ಒಟ್ಟು ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಹತ್ತು ವರ್ಷಗಳಲ್ಲಿ ದಕ್ಷಿಣ ಕರ್ನಾಟಕ ಮತ್ತು ಉತ್ತರ ಕರ್ನಾಟಕದಲ್ಲಿ ಹೊಸದಾಗಿ ಸ್ಥಾಪನೆಗೊಂಡ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಇ) ಸಣ್ಣ ಕೈಗಾರಿಕಾ ಕ್ಷೇತ್ರದಲ್ಲಿನ ಪ್ರಾದೇಶಿಕ ಅಸಮತೋಲನವನ್ನು ನಿವಾರಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ?

## ಸೇಡು ಮಣ್ಣಿನ ಕಳ್ಳ ಸಾಗಾಣಿಕೆ ತಡೆಗಟ್ಟುವ ಕುರಿತು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೬೦ (೧೭೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾನಾಪುರದಲ್ಲಿ ಸೇಡು ಮಣ್ಣಿನ ಕಳ್ಳ ಸಾಗಾಣಿಕೆಯಿಂದಾಗಿ ಖಜಾನೆಗೆ ಕೋಟ್ಯಾಂತರ ರೂಪಾಯಿಗಳ ಹಾನಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಅಕ್ರಮ ವ್ಯವಹಾರವನ್ನು ತಡೆಗಟ್ಟಿ ಸರ್ಕಾರದ ಆದಾಯ ಹೆಚ್ಚಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದೆ ;

(ಇ) ಅದೇ ರೀತಿಯಲ್ಲಿ ಅಕ್ರಮ ಮರಳು ಸಾಗಾಣಿಕೆ ನಿಯಂತ್ರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆ ಮತ್ತು ಜನಸಂಪರ್ಕ ಸಭೆ ಏರ್ಪಡಿಸುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೬೧ (೧೭೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಸುವರ್ಣ ವಿಧಾನಸೌಧದ ಬಳಕೆ ವಿಷಯ ಕುರಿತು ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸುವರ್ಣ ವಿಧಾನಸೌಧದ ಸದ್ಬಳಕೆ ಮಾಡಿಕೊಳ್ಳಲು ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು ;

(ಇ) ಸುವರ್ಣ ವಿಧಾನಸೌಧದಲ್ಲಿ ಕಾಲ ಕಾಲಕ್ಕೆ ಸಚಿವ ಸಂಪುಟ ಸಭೆಗಳನ್ನು ಮತ್ತು ಸಾರ್ವಜನಿಕ ಸಂಪರ್ಕ ಸಭೆಗಳನ್ನು ಏರ್ಪಡಿಸಲಾಗುವುದೆ ?

## ಪಶು ವೈದ್ಯಕೀಯ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ನಿರ್ಮಿಸುವುದು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೬೨ (೧೭೯೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪಶು ವೈದ್ಯ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಸಂಸ್ಥೆಗಳಿಗೆ ನೇರ ಸಂಪರ್ಕ ಜಾಲವನ್ನು ಕಲ್ಪಿಸಲಾಗುವುದೆ ;

(ಇ) ಬೆಂಗಳೂರು, ಮೈಸೂರು, ಬೆಳಗಾವಿ, ಧಾರವಾಡ, ಗದಗ, ಕಲಬುರ್ಗಿ, ಬೀದರ್ ಮುಂತಾದ ಸ್ಥಳಗಳಲ್ಲಿ ಪಶು ವೈದ್ಯಕೀಯ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ನಿರ್ಮಿಸಲಾಗುವುದೆ ?

## ನಗರಾಭಿವೃದ್ಧಿ ಪ್ರಾಧಿಕಾರಗಳ ಕಾರ್ಯವ್ಯಾಪ್ತಿ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)** :-

೧೩೬೩ (೧೭೭೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಷ್ಟು ನಗರಗಳಲ್ಲಿ ನಗರಾಭಿವೃದ್ಧಿ ಪ್ರಾಧಿಕಾರಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ನೀಡುವುದು)

(ಆ) ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ಸ್ಥಾಪಿಸಲು ಕಾರಣಗಳೇನು;

(ಇ) ನಗರಾಭಿವೃದ್ಧಿ ಪ್ರಾಧಿಕಾರಗಳ ಕಾರ್ಯವ್ಯಾಪ್ತಿ ಹಾಗೂ ಜವಾಬ್ದಾರಿಗಳೇನು ; (ವಿವರ ನೀಡುವುದು)

(ಈ) ನಗರಾಭಿವೃದ್ಧಿ ಪ್ರಾಧಿಕಾರಗಳಿದ್ದು ಕಾರ್ಯನಿರ್ವಹಿಸುತ್ತಿದ್ದರೂ ರಸ್ತೆ, ಸಾರಿಗೆ, ನೀರು, ಒಳಚರಂಡಿ, ಘನ ಹಾಗೂ ದ್ರವ ತ್ಯಾಜ್ಯ ನಿರ್ವಹಣೆ, ನಿವೇಶನ ಹಾಗೂ ಬಡಾವಣೆಗಳ ಅಭಿವೃದ್ಧಿ ಹಾಗೂ ಇತರ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ವಿಫಲವಾಗುತ್ತಿರಲು ಕಾರಣಗಳೇನು; ಇದರ ಪರಿಣಾಮವಾಗಿ ನಗರಗಳು ಅಡ್ಡಾದಿಡ್ಡಿಯಾಗಿ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತಾಗಿ ಸರ್ಕಾರದ ಆಲೋಚನೆಗಳೇನು ?

## ರೇಷ್ಮೆ ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)** :–

೧೩೬೪ (೧೭೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೇಷ್ಮೆ ಬೆಳೆಯ ಹಿತರಕ್ಷಣಾ ಸಮಿತಿಯು ವಿವಿಧ ಸಂಸ್ಥೆಗಳ ಜೊತೆಗೂಡಿ ರೇಷ್ಮೆ ಬೆಳೆಗಾರರ ಸಂಕಷ್ಟ ಪರಿಹಾರಕ್ಕೆ ಒತ್ತಾಯಿಸಿ ಅನಿರ್ಧಿಷ್ಟಾವಧಿಯ ಧರಣಿ ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೇಷ್ಮೆ ಧಾರಣೆ ಕುಸಿತವನ್ನು ತಡೆಗಟ್ಟಲು ಹಾಗೂ ರೇಷ್ಮೆಗೂಡಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಲು ಇರುವ ಮಾನದಂಡಗಳೇನು ;

(ಇ) ಈ ಮಾನದಂಡಗಳ ಅನ್ವಯ ಬೆಲೆ ನಿಗದಿಪಡಿಸಲಾಗುತ್ತಿದೆಯೇ ;

(ಈ) ಇಲ್ಲವಾದಲ್ಲಿ, ಕಾರಣಗಳೇನು ? (ವಿವರ ನೀಡುವುದು)

## ಶಿಕ್ಷಣ ಸಂಸ್ಥೆ ಹಾಗೂ ದೇವಸ್ಥಾನಗಳಿಂದ ಮದ್ಯದಂಗಡಿಗಳಿಗೆ ಇರುವ ಅಂತರ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)** :–

೧೩೬೫ (೧೭೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಕಾಯಿದೆಯನ್ವಯ ಶಿಕ್ಷಣ ಸಂಸ್ಥೆ ಹಾಗೂ ದೇವಸ್ಥಾನಗಳಿಂದ ಎಷ್ಟು ದೂರದ ಅಂತರದಲ್ಲಿ ಮದ್ಯದಂಗಡಿಗಳು ಇರಬೇಕೆಂದು ನಿಯಮವಿದೆ ;

(ಆ) ಈ ನಿಯಮವನ್ನು ಕಡ್ಡಾಯವಾಗಿ ಅನುಸರಿಸಲಾಗುತ್ತಿದೆಯೇ ;

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈ ನಿಯಮವನ್ನು ಉಲ್ಲಂಘಿಸಿರುವ ಪ್ರಕರಣಗಳೆಷ್ಟು ;

(ಈ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಶಾಲೆಗಳಿಂದ ೧೫೦ ಅಡಿಗಳ ಅಂತರಕ್ಕಿಂತಲೂ ಕಡಿಮೆ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ಅಂಗಡಿ ಹಾಗೂ ಬಾರ್‌ಗಳಿದ್ದು, ಇದರಿಂದ ಶಾಲಾ ಮತ್ತು ಕಾಲೇಜು ಮಕ್ಕಳ ಮೇಲೆ ವ್ಯತಿರಿಕ್ತ ಪ್ರಭಾವ ಉಂಟಾಗುವುದನ್ನು ತಪ್ಪಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?

## ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳ ವಾರ್ಷಿಕ ನಿರ್ವಹಣೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೩೬೬ (೧೭೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿ ಕಟ್ಟಡಗಳ ವಾರ್ಷಿಕ ನಿರ್ವಹಣೆಗಾಗಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ; (ವಿವರ ನೀಡುವುದು)

(ಆ) ಇದಕ್ಕೆ ತಗಲುವ ವಾರ್ಷಿಕ ವೆಚ್ಚವೆಷ್ಟು ? (ಪ್ರತ್ಯೇಕವಾಗಿ ವಿವರ ನೀಡುವುದು)

## ಡಾ॥ ವಿಷ್ಣುವರ್ಧನ್ ರಸ್ತೆಯ ಅಗಲೀಕರಣ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೩೬೭ (೧೭೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಉತ್ತರಹಳ್ಳಿ ಸರ್ಕಲ್‌ನಿಂದ ಪದ್ಮನಾಭ ನಗರದವರೆಗೆ ಇರುವ ಡಾ:ವಿಷ್ಣುವರ್ಧನ್ ರಸ್ತೆಯು ಅಗಲೀಕರಣ ಸರ್ಕಾರದ ಯೋಜನೆಯಲ್ಲಿದೆಯೇ ;

(ಆ) ಇದ್ದಲ್ಲಿ, ಎಷ್ಟು ಮೀಟರ್ ರಸ್ತೆ ಅಗಲೀಕರಣದ ಬಗ್ಗೆ ಪ್ರಸ್ತಾವನೆಯಲ್ಲಿದೆ ;

(ಇ) ಈ ಯೋಜನೆಯು ಸುಮಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

# ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ-೨೦೧೨, ಹಾಗೂ ಅಧಿನಿಯಮ-೨೦೧೩ರ ತಿದ್ದುಪಡಿ ಕುರಿತು

**ಶ್ರೀ ಬಸವರಾಜ ಹೊರಟ್ಟಿ (ಪದವೀಧರರ ಕ್ಷೇತ್ರ) :-**

೧೩೬೮ (೧೭೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ-೨೦೧೨ ಹಾಗೂ ಅಧಿನಿಯಮ-೨೦೧೩ಕ್ಕೆ ಸಂಬಂಧಿಸಿ ದಿನಾಂಕ:೧೯-೦೯-೨೦೧೪ರಂದು ಸರ್ಕಾರ ಹೊರಡಿಸಿರುವ ಆದೇಶದಲ್ಲಿ, ನಿಯಮಗಳ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾಯಂಗೊಂಡ ದಿನಗೂಲಿ ನೌಕರರುಗಳಿಗೆ ಸರ್ಕಾರಿ ಆದೇಶದ ದಿನಾಂಕ:೧೯-೦೯-೨೦೧೪ರ ಬದಲಾಗಿ ಅಧಿನಿಯಮ ಜಾರಿಗೆ ಬಂದ ದಿನಾಂಕ:೧೫-೦೨-೨೦೧೩ರಿಂದ ಸೌಲಭ್ಯಗಳನ್ನು ನೀಡಲು ಸರ್ಕಾರ ಪರಿಷ್ಕೃತ ಆದೇಶ ಹೊರಡಿಸಲು ಚಿಂತಿಸಿದೆಯೇ ;

(ಇ) ಎಲ್ಲಾ ಸರ್ಕಾರಿ ನೌಕರರುಗಳಂತೆ, ಖಾಯಂಗೊಂಡ ದಿನಗೂಲಿ ನೌಕರರುಗಳಿಗೆ ಶೇ.೭೫ರ ಬದಲಾಗಿ ಶೇ.೧೦೦ ರಷ್ಟು ಭತ್ಯೆಗಳನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೇ ;

(ಈ) ಖಾಯಂಗೊಂಡ ದಿನಗೂಲಿ ನೌಕರರುಗಳು ಮೇಲ್ಕಾಣಿಸಿದ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೇ ?

## ಎಂ.ಎಸ್.ಐ.ಎಲ್‌ನ ಗುತ್ತಿಗೆ ನೌಕರರ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಪದವೀಧರರ ಕ್ಷೇತ್ರ) :-**

೧೩೬೯ (೧೭೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ಒಂದಾದ ಎಂ.ಎಸ್.ಐ.ಎಲ್‌ನಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕ ಹೊಂದಿರುವ ನೌಕರರ ಸಂಖ್ಯೆ ಎಷ್ಟು ; ಯಾವ ಯಾವ ವಿಭಾಗಗಳಿಗೆ ಎಷ್ಟೆಷ್ಟು ಗುತ್ತಿಗೆ ನೌಕರರನ್ನು ನೇಮಿಸಿಕೊಳ್ಳಲಾಗಿದೆ; ಆ ಪೈಕಿ ಹಾಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಆ) ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ಎಷ್ಟು ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ; ಸದರಿ ನೌಕರರನ್ನು ಏಕಾಏಕಿ ವರ್ಗಾವಣೆ ಮಾಡುವುದು ಮತ್ತು ಕೆಲಸದಿಂದ ವಜಾ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು;

(ಇ) ಸದರಿ ನೌಕರರು ಪ್ರತಿದಿನ ಕರ್ತವ್ಯ ನಿರ್ವಹಿಸಬೇಕಾದ ಅವಧಿ ಎಷ್ಟು; ಅವುಗಳಿಗೆ ಪಾವತಿಸಲಾಗುತ್ತಿರುವ ವೇತನ ಎಷ್ಟು; ಯಾವ ದಿನಾಂಕದಂದು ಪಾವತಿಸಲಾಗುತ್ತಿದೆ;

(ಈ) ಡಿಸ್ಟ್ರಿಕ್ಟ್ ಇನ್- ಚಾರ್ಜ್ ಮತ್ತು ರೀಟೇಲ್ ಇನ್-ಚಾರ್ಜ್ ಅಧಿಕಾರಿಗಳು ಸದರಿ ನೌಕರರಿಂದ ಲಂಚ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಸದರಿ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ? (ಎಲ್ಲೆಲ್ಲಿ ಮತ್ತು ಯಾವಾಗ ಎಂಬ ಮಾಹಿತಿಯೊಂದಿಗೆ ವಿವರ ನೀಡುವುದು)

## ಬೆಂಗಳೂರು ಮಹಾನಗರದಲ್ಲಿ ಪಾದಚಾರಿ ದಾರಿಗಳನ್ನು ಅಕ್ರಮಿಸಿರುವುದು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** :-

೧೩೭೦ (೧೭೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮಹಾನಗರದಲ್ಲಿ ಪಾದಚಾರಿ ದಾರಿಗಳನ್ನು ಮುಖ್ಯವಾಗಿ ಅಂಗಡಿಯವರು ಹಾಗೂ ಇತರರು ಅಕ್ರಮವಾಗಿ ಆಕ್ರಮಿಸಿ ಪಾದಚಾರಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಅದರಿಂದ ಪಾದಚಾರಿಗಳಿಗೆ ತೊಂದರೆ ಯಾಗುವುದಿಲ್ಲವೇ ;

(ಇ) ಇದನ್ನು ತಪ್ಪಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೈಗೊಂಡಿರುವ ಕ್ರಮಗಳೇನು ;

(ಈ) ಉಚ್ಚ ನ್ಯಾಯಾಲಯವು ಈ ಬಗ್ಗೆ ಬಿ.ಬಿ.ಎಂ.ಪಿ ಗೆ ಸಾಕಷ್ಟು ಎಚ್ಚರಿಕೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಶೌಚಾಲಯದ (ಹೊಲಸು) ನೀರು ಸಂಗ್ರಹವಾಗುವ ಬಗ್ಗೆ

**ಶ್ರೀ ಬಿ.ಜಿ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)** :-

೧೩೭೧ (೧೭೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ದಿನಕ್ಕೆ ಸಂಗ್ರಹವಾಗುವ ಶೌಚಾಲಯದ (ಹೊಲಸು) ನೀರಿನ ಪ್ರಮಾಣ ಎಷ್ಟು ;

(ಆ) ಆ ನೀರಿನ ಒಟ್ಟು ಪ್ರಮಾಣದಲ್ಲಿ ಎಷ್ಟು ಹೊಲಸು ನೀರು ರಾಜಕಾಲುವೆ ಮತ್ತು ಕೆರೆಗಳಿಗೆ ಸೇರುತ್ತಿದೆ ಮತ್ತು ಎಷ್ಟು ಹೊಲಸು ನೀರನ್ನು ಶುದ್ಧೀಕರಣ ಮಾಡಲಾಗುತ್ತಿದೆ ; ಉಳಿಕೆ ಎಷ್ಟು ನೀರನ್ನು ರಾಜಕಾಲುವೆ/ಕೆರೆಗಳಿಗೆ ಬಿಡಲಾಗುತ್ತಿದೆ ;

(ಇ) ಇತ್ತೀಚೆಗೆ ಕೆಲವು ರಾಜಕಾಲುವೆ ಮತ್ತು ಕೆರೆಗಳಿಗೆ ಹೊಲಸು ನೀರಿನ ಪ್ರಮಾಣ ಸೇರಿ ಜನರು ಅನಾರೋಗ್ಯದಿಂದ ಬಳಲುತ್ತಿರುವುದು ನಿಜವೆ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಹೊಲಸು ನೀರು ಶುದ್ಧೀಕರಣಕ್ಕೆ ಹೆಚ್ಚು ಶುದ್ಧೀಕರಣ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ ? (ಪೂರ್ಣ ವಿವರ ನೀಡುವುದು)

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೩೭೨ (೧೭೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ೨೦೧೧ರಿಂದ ಇಲ್ಲಿಯವರೆಗೆ ಯಾವ್ಯಾವ ಸಂಘ-ಸಂಸ್ಥೆಗಳಿಗೆ ಮತ್ತು ಒಕ್ಕೂಟ ಸಮಿತಿಗಳಿಗೆ, ಆರ್ಥಿಕವಾಗಿ ಹಿಂದುಳಿದವರಿಗೆ ೨೦x೩೦ ಅಳತೆಯ (ಇ.ಡಬ್ಲ್ಯೂ.ಎಸ್) ಎಷ್ಟು ನಿವೇಶನಗಳನ್ನು ಸಗಟಾಗಿ ಹಂಚಿಕೆ ಮಾಡಲಾಗಿದೆ ;

(ಆ) ಯಾವ್ಯಾವ ಬಡಾವಣೆಯಲ್ಲಿ ಈ ರೀತಿ ಹಂಚಿಕೆ ಮಾಡಲಾಗಿದೆ ; ಹಂಚಿಕೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೇ ; (ಬಡಾವಣೆವಾರು ವಿವರ ಒದಗಿಸುವುದು)

(ಇ) ಹಂಚಿಕೆ ಮಾಡಿದ್ದಲ್ಲಿ, ಸಂಘ-ಸಂಸ್ಥೆಗಳು ಮತ್ತು ನಿವೇಶನ ಪಡೆದ ಫಲಾನುಭವಿಗಳ ಸಂಪೂರ್ಣ ವಿವರ ಒದಗಿಸುವುದು ;

(ಈ) ಇ.ಡಬ್ಲ್ಯೂ.ಎಸ್ ನಿವೇಶನಗಳನ್ನು ಹಂಚಲು ಅನುಸರಿಸುವ ಮಾನದಂಡಗಳೇನು ?

## ಬಾಗಲಕೋಟೆ ಜಿಲ್ಲೆಯ ಧಾರ್ಮಿಕ ದತ್ತಿ ದೇವಸ್ಥಾನಗಳು

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭೩ (೧೩೪೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಧಾರ್ಮಿಕ ದತ್ತಿ ಇಲಾಖೆಯಡಿಯಲ್ಲಿರುವ ದೇವಸ್ಥಾನಗಳು ಎಷ್ಟು ;

(ಆ) ಈ ದೇವಾಲಯಗಳ ನಿರ್ವಹಣೆಗೆ ಯಾರನ್ನು ನೇಮಕ ಮಾಡಲಾಗಿದೆ ;

(ಇ) ರಾಜ್ಯದಲ್ಲಿ ದೇವಸ್ಥಾನಗಳಿಗೆ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದ ಜನತೆಯ ತಲಾ ಸಾಲದ ಹೊರೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೭೪ (೧೩೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ಸಾಲ ಭಾಗ್ಯ ಯೋಜನೆಯನ್ನು ಜಾರಿಗೆ ತರಲು ಮುಂದಾಗಿದೆಯೇ ; ಹಾಗಿದ್ದಲ್ಲಿ, ರಾಜ್ಯದ ಪ್ರತಿ ಪ್ರಜೆಯ ಮೇಲೆ ಇರುವ ಸಾಲದ ಹೊರೆ ಎಷ್ಟು ; ಇದಕ್ಕೆ ಕಾರಣಗಳೇನು ;

(ಆ) ರೂ. ೨೫ ಸಾವಿರಕ್ಕೂ ಹೆಚ್ಚಿನ ಮೊತ್ತದ ಸಾಲ ಪ್ರತಿ ಪ್ರಜೆಯ ಮೇಲೆ ಬಾಕಿ ಇರುವುದು ನಿಜವೇ ; ಇದರಿಂದಾಗಿ ಸಾಲಭಾಗ್ಯ ಜಾರಿ ಮಾಡುವ ನಿಲುವು ಸರ್ಕಾರದ್ದಾಗಿದೆಯೇ ;

(ಇ) ಪ್ರಸ್ತುತ ರಾಜ್ಯದಲ್ಲಿರುವ ಸರ್ಕಾರದ ಸಾಲದ ಪ್ರಮಾಣ ಎಷ್ಟು ; ಇದು ಕಳೆದ ೨-೩ ವರ್ಷಗಳಿಗೆ ಹೋಲಿಸಿದಲ್ಲಿ ಸಾಲ ಹೆಚ್ಚಳವಾಗಿರುವುದು ಕಂಡುಬಂದಿದೆಯೇ ;

(ಈ) ಸಾಲದ ಹೊಣೆ ಕಡಿಮೆ ಮಾಡದೇ ಹೆಚ್ಚಿಸಿರುವುದನ್ನು ನೋಡಿದರೆ ನಿರ್ವಹಣೆಯಲ್ಲಿ ವಿಫಲವಾಗಿರುವುದರ ಬಗ್ಗೆ ಸರ್ಕಾರದ ನಿಲುವು ಏನು ;

(ಉ) ಇದರ ಸಮರ್ಪಕ ನಿರ್ವಹಣೆಗೆ ರಾಜಸ್ವ ತೆರಿಗೆ ವಸೂಲಿ ಹೆಚ್ಚಳದಿಂದ ಸಾಲ ಎತ್ತುವಳಿಯ ಅವಲಂಬನೆ ಕಡಿಮೆಯಾಗುತ್ತಿದ್ದ ವಿಚಾರದ ಬಗ್ಗೆ ಸರ್ಕಾರ ಗಮನಹರಿಸಿದೆಯೇ ? (ವಿವರಗಳನ್ನು ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂ-59/ಕಾ.ಸೂ. 3582/700 ಪ್ರತಿಗಳು/13-06-2015